ಸಂಪುಟ : 9 ಸಂಚಿಕೆ 87 ಪುಟ : 4 ಬೆಲೆ: 3.00 ಮಂಗಳವಾರ ಮೇ 7 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 87 Pages : 4 Price : 3.00 Tuesday May 7 2024 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಕೋಳಿ ಸಾಕಾಣಿಕೆ ಉಚಿತ ತರಬೇತಿ

■ ವಿಜಯಸಾಕ್ಷಿ ಸುದ್ದಿ, ಗದಗ

SBI-ASFD ಆರ್‌ಸೆಟಿ (ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ ಹುಲಕೋಟಿ) ಮತ್ತು ಅಗ್ರೀಕಲ್ಚರಲ್ ಸೈನ್ಸ್ ಫೌಂಡೇಶನ್ ಹುಲಕೋಟಿ, ಇವುಗಳ ಸಂಯುಕ್ತ ಆಶ್ರಯದಲ್ಲಿ ಕೋಳಿ ಸಾಕಾಣಿಕೆ ಉಚಿತ ತರಬೇತಿಯು ಮೇ 9ರಂದು ಆರಂಭವಾಗಲಿದೆ.

ನಿರುದ್ಯೋಗಿಗಳು, ಯುವಕ/ಯುವತಿಯರು, ಸ್ವ-ಸಹಾಯ ಗುಂಪಿನವರು ಮತ್ತು ಸಾಮಾನ್ಯ ಜನರು 19ರಿಂದ 44 ವಯಸ್ಸಿನೊಳಗಿನ ಗ್ರಾಮೀಣ ಭಾಗದ ಆಸಕ್ತ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿದೆ. ಈ ತರಬೇತಿ ಊಟ, ವಸತಿಯೊಂದಿಗೆ ಉಚಿತವಾಗಿರುತ್ತದೆ. ಕೇಂದ್ರ ಸರಕಾರದಿಂದ ತರಬೇತಿಯ ಪ್ರಮಾಣಪತ್ರ ಸಿಗಲಿದ್ದು, ಮಹಿಳೆಯರಿಗೆ ಪ್ರತ್ಯೇಕ ವಸತಿ ಸೌಲಭ್ಯವಿರುತ್ತದೆ.

ತರಬೇತಿ ಪಡೆಯಲು ಇಚ್ಛಿಸುವವರು ಗ್ರಾಮೀಣ ಪ್ರದೇಶದಲ್ಲಿ ವಾಸವಾಗಿರಬೇಕು, ಬಿ.ಪಿ.ಎಲ್ ರೇಶನ್‌ಕಾರ್ಡ್, ಅಂತ್ಯೋದಯ, ಎ.ಎ.ವಾಯ್, ಪಿ.ಎಚ್.ಎಚ್, ಆದ್ಯತಾ ಕುಟುಂಬ ರೇಶನ್ ಕಾರ್ಡ್ ಅಥವಾ ನರೇಗಾ (ಜಾಬ್) ಕಾರ್ಡ್ ಇವುಗಳಲ್ಲಿ ಯಾವುದಾದರೂ ಒಂದನ್ನು ಹೊಂದಿರಬೇಕು. (ಆಧಾರಕಾರ್ಡ್, ಫೋಟೋ-ರೇಶನ್‌ಕಾರ್ಡ್, ಬ್ಯಾಂಕ್ ಪಾಸ್‌ಬುಕ್- ಈ ಎಲ್ಲ 2 ಸೆಟ್ ನಕಲು ಪ್ರತಿಗಳನ್ನು ಸಲ್ಲಿಸಬೇಕು) ಎಸ್.ಬಿ.ಆಯ್ ಆರ್‌ಸೆಟಿ ಹುಲಕೋಟಿ ಗದಗ ಸಂಸ್ಥೆಯಲ್ಲಿ ದೊರೆಯುವ ಅರ್ಜಿ ಫಾರಂನಲ್ಲಿ ತುಂಬಿ ನಿರ್ದೇಶಕರು, SBI-ASF ಆರ್‌ಸೆಟಿ ಸಂಸ್ಥೆ ಹುಲಕೋಟಿ ಗದಗ, ಕೃಷಿ ವಿಜ್ಞಾನ ಕೇಂದ್ರ ಆವರಣ, ಹುಲಕೋಟಿ ಇವರಿಗೆ ಅರ್ಜಿ ಸಲ್ಲಿಸಬೇಕು ಅಥವಾ ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ- 9480880201/ 8880169996/ 9632287949/ 9632635268/ 9448874412 ಸಂಪರ್ಕಿಸಲು ಕೋರಲಾಗಿದೆ.

## ಸಾರಿಗೆ ಕಾರ್ಯಾಚರಣೆಯಲ್ಲಿ ವ್ಯತ್ಯಯ

■ ವಿಜಯಸಾಕ್ಷಿ ಸುದ್ದಿ, ಗದಗ

ಮೇ 7ರಂದು ಲೋಕಸಭಾ ಚುನಾವಣೆಗೆ ಮತದಾನ ನಡೆಯಲಿರುವ ಪ್ರಯುಕ್ತ ಚುನಾವಣಾ ಕಾರ್ಯಕ್ಕಾಗಿ ವಾ.ಕ.ರ.ಸಾ. ಸಂಸ್ಥೆಯ ವ್ಯಾಪ್ತಿಯ ವಿಭಾಗಗಳಾದ ಹುಬ್ಬಳ್ಳಿ ಗ್ರಾಮಾಂತರ-85, ಹು-ಧಾ ನಗರ ಸಾರಿಗೆ-84, ಧಾರವಾಡ-124, ಗದಗ-132, ಬೆಳಗಾವಿ-169, ಉತ್ತರ ಕನ್ನಡ-137, ಹಾವೇರಿ-224, ಚಿಕ್ಕೋಡಿ-350 ಮತ್ತು ಬಾಗಲಕೋಟೆ-219 ಒಟ್ಟು 1524 ವಾಹನಗಳನ್ನು ನೀಡಲಾಗಿದೆ.

ಈ ಕಾರಣದಿಂದ ಮೇ 7ರವರೆಗೂ ಸಾರಿಗೆ ಕಾರ್ಯಾಚರಣೆಯಲ್ಲಿ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕ ಪ್ರಯಾಣಿಕರು ಸಹಕರಿಸಬೇಕೆಂದು ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಪ್ರಕಟಣೆ ತಿಳಿಸಿದೆ.

## ಚುನಾವಣೆಗೆ ವೇತನ ಸಹಿತ ರಜೆ

■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತ ಚುನಾವಣಾ ಆಯೋಗವು ಲೋಕಸಭಾ ಸಾರ್ವತ್ರಿಕ ಚುನಾವಣೆ ಸಂಬಂಧ ಜಿಲ್ಲೆಯಲ್ಲಿ ಮೇ 7ರಂದು ಮತದಾನ ನಡೆಸಲಿದೆ.

ಈ ಚುನಾವಣಾ ಕ್ಷೇತ್ರಗಳ ವ್ಯಾಪ್ತಿಯಲ್ಲಿರುವ ಮತದಾರರು ಮತ ಚಲಾಯಿಸಲು ಅನುಕೂಲವಾಗುವಂತೆ ಆಯಾ ಚುನಾವಣಾ ಕ್ಷೇತ್ರಗಳ ವ್ಯಾಪ್ತಿಯಲ್ಲಿರುವ ಎಲ್ಲ ರಾಜ್ಯ ಸರ್ಕಾರಿ ಕಚೇರಿಗಳಿಗೆ, ಶಾಲಾ ಕಾಲೇಜುಗಳಿಗೆ (ಅನುದಾನಿತ ಶಿಕ್ಷಣ ಸಂಸ್ಥೆಗಳು ಒಳಗೊಂಡಂತೆ) ಹಾಗೂ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು ಒಳಗೊಂಡಂತೆ ಮೇ 7ರಂದು ನಡೆಯುವ ಚುನಾವಣೆಗೆ ಆಯಾ ಚುನಾವಣಾ ಕ್ಷೇತ್ರಗಳಿಗೆ ಸೀಮಿತಗೊಳಿಸಿ ಸಾರ್ವತ್ರಿಕ ರಜೆ ಘೋಷಿಸಿದೆ.

ಲೋಕಸಭಾ ಕ್ಷೇತ್ರಗಳ ಅರ್ಹ ಮತದಾರರಾಗಿರುವ ಎಲ್ಲ ವ್ಯವಹಾರಿಕ ಸಂಸ್ಥೆಗಳು, ಔದ್ಯಮಿಕ ಸಂಸ್ಥೆಗಳು ಮತ್ತು ಇನ್ನಿತರೆ ಸಂಸ್ಥೆಗಳಲ್ಲಿ ಖಾಯಂ ಆಗಿ ಅಥವಾ ದಿನಗೂಲಿ ಮೇಲೆ ಕೆಲಸ ನಿರ್ವಹಿಸುತ್ತಿರುವ ನೌಕರರಿಗೆ ಮತದಾನ ಮಾಡಲು ಅನುಕೂಲವಾಗುವಂತೆ ಪ್ರಜಾಪ್ರತಿನಿಧಿ ಕಾಯ್ದೆ 1951, ಕಲಂ 135 ಬಿ ಅಡಿಯಲ್ಲಿನ ವೇತನ ಸಹಿತ ರಜೆ ನೀಡಲು ಆದೇಶಿಸಿದೆ.

ಮೇ 7ರಂದು ಸಾರ್ವತ್ರಿಕ ರಜೆಯನ್ನು ನೆಗೋಷಿಯೇಬಲ್ ಇನ್‌ಸ್ಟ್ರುಮೆಂಟ್ ಆ್ಯಕ್ಟ್ 1881ರ ಪ್ರಕಾರವೂ ಸಹ ಘೋಷಿಸಿದೆ. ಈ ರಜೆಯು ತುರ್ತು ಸೇವೆಗಳಿಗೆ ಅನ್ವಯಿಸುವುದಿಲ್ಲ. ಆದಾಗ್ಯೂ ಕೂಡ ತುರ್ತು ಸೇವೆಯಡಿ ಕೆಲಸ ಮಾಡುವ ನೌಕರರಿಗೆ ಮತ ಚಲಾಯಿಸಲು ಅನುಕೂಲವಾಗುವಂತೆ ವ್ಯವಸ್ಥೆ ಮಾಡತಕ್ಕದ್ದು ಎಂದು ರಾಜ್ಯ ಸರ್ಕಾರದ ಸಚಿವಾಲಯದ ಪ್ರಕಟಣೆ ತಿಳಿಸಿದೆ.

## ಕೇಜ್ರಿವಾಲ್ ವಿರುದ್ಧ ಎನ್‌ಐಎ ತನಿಖೆಗೆ ಶಿಫಾರಸು ಮಾಡಿದ ದೆಹಲಿ ಲೆಫ್ಟಿನೆಂಟ್ ಗವರ್ನರ್

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ನಿಷೇಧಿತ ಭಯೋತ್ಪಾದಕ ಸಂಘಟನೆ 'ಸಿಖ್ಸ್ ಫಾರ್ ಜಸ್ಟೀಸ್' ನಿಂದ ತಮ್ಮ ಪಕ್ಷಕ್ಕೆ ದೇಣಿಗೆ ಪಡೆದ ಆರೋಪದ ಮೇಲೆ ಸಿಎಂ ಅರವಿಂದ್ ಕೇಜ್ರಿವಾಲ್ ವಿರುದ್ಧ ಎನ್‌ಐಎ ತನಿಖೆಗೆ ದೆಹಲಿ ಲೆಫ್ಟಿನೆಂಟ್ ಗವರ್ನರ್ ವಿ ಕೆ ಸಕ್ಸೇನಾ ಶಿಫಾರಸು ಮಾಡಿದ್ದಾರೆ

ಎಎಪಿಯು 1993ರ ದೆಹಲಿ ಬಾಂಬ್ ಸ್ಫೋಟ ಪ್ರಕರಣದ ಅಪರಾಧಿ ದೇವೇಂದ್ರ ಪಾಲ್ ಭುಲ್ಲರ್ ಬಿಡುಗಡೆಗೆ ಅನುಕೂಲವಾಗುವಂತೆ ಉಗ್ರ ಖಲಿಸ್ತಾನಿ ಗುಂಪುಗಳಿಂದ 16 ಮಿಲಿಯನ್ ಅಮೆರಿಕ ಡಾಲರ್ ಹಣ ಪಡೆದಿದೆ ಎಂಬ ದೂರನ್ನು ಸಕ್ಸೇನಾ ಅವರು ಸ್ವೀಕರಿಸಿದ್ದಾರೆ ಎಂದು ಕೇಂದ್ರ ಗೃಹ ಕಾರ್ಯದರ್ಶಿಗೆ ಬರೆದ ಪತ್ರದಲ್ಲಿ ರಾಜ್ಯಪಾಲರ ಕಾರ್ಯದರ್ಶಿ ತಿಳಿಸಿದ್ದಾರೆ.

ಪತ್ರದಲ್ಲಿ 2014ರಲ್ಲಿ ನ್ಯೂಯಾರ್ಕ್‌ನ ಗುರುದ್ವಾರ ರಿಚ್‌ಮಂಡ್ ಹಿಲ್ಸ್‌ನಲ್ಲಿ ಅರವಿಂದ್ ಕೇಜ್ರಿವಾಲ್ ಮತ್ತು ಖಲಿಸ್ತಾನಿ ಪರ ಸಿಖ್ಖರ ನಡುವೆ ರಹಸ್ಯ ಸಭೆ ನಡೆದಿದೆ. ಅರವಿಂದ್ ಕೇಜ್ರಿವಾಲ್ ಅವರು ದೇಣಿಗೆಗೆ ಬದಲಾಗಿ ಭುಲ್ಲರ್ ಬಿಡುಗಡೆಗೆ ಅನುಕೂಲ ಮಾಡಿಕೊಡುವುದಾಗಿ ಭರವಸೆ ನೀಡಿದ್ದಾರೆ ಎಂದು ಆರೋಪಿಸಲಾಗಿದೆ.

ಪತ್ರದ ಪ್ರಕಾರ, ಎಎಪಿ ಕಾರ್ಯಕರ್ತ ಮುನೀಶ್ ಕುಮಾರ್ ರೈಜಾಡಾ ಅವರು ರಿಚ್ಮಂಡ್ ಹಿಲ್ ಗುರುದ್ವಾರದಲ್ಲಿ ಸಿಖ್ ನಾಯಕರನ್ನು ಅರವಿಂದ್ ಕೇಜ್ರಿವಾಲ್ ಭೇಟಿಯಾದ ಚಿತ್ರವನ್ನು ಹಂಚಿಕೊಂಡಿದ್ದಾರೆ. ಕೇಜ್ರಿವಾಲ್ ಅವರು ಖಲಿಸ್ತಾನ್ ಪರ ಸಿಖ್ ನಾಯಕರೊಂದಿಗೆ ಗೌಪ್ಯ ಸಭೆ ನಡೆಸಿದರು ಎಂದು ಅಧಿಕಾರಿಗಳು ಆರೋಪಿಸಿದ್ದಾರೆ. ಇದಲ್ಲದೆ ಕೇಜ್ರಿವಾಲ್ ಅವರು ಮಾಜಿ ರಾಷ್ಟ್ರಪತಿ ಪ್ರಣಬ್ ಮುಖರ್ಜಿ ಅವರಿಗೆ ಪತ್ರ ಬರೆದು ಭುಲ್ಲರ್‌ಗೆ ಕ್ಷಮಾದಾನ ಕೋರಿದ್ದಾರೆ ಎಂದು ಆಪಾದಿಸಲಾಗಿದೆ.

### ಮಸ್ಟರಿಂಗ್ ಕೇಂದ್ರಕ್ಕೆ ಭೇಟಿ ನೀಡಿ ಮಾಹಿತಿ ಪಡೆದ ಡಿಸಿ, ಚುನಾವಣಾ ಸಾಮಾನ್ಯ ವೀಕ್ಷಕರು

# ಸುಸೂತ್ರವಾಗಿ ನಡೆದ ಮಸ್ಟರಿಂಗ್ ಕಾರ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಚುನಾವಣೆ ಸಂಬಂಧ ಮಸ್ಟರಿಂಗ್ ಕಾರ್ಯವು ಶಿರಹಟ್ಟಿಯ ಎಫ್.ಎಂ. ಡಬಾಲಿ ಪಿ.ಯು ಕಾಲೇಜು, ಗದಗ ನಗರದ ಗುರುಬಸವ ಸಿಬಿಎಸ್‌ಇ ಶಾಲೆ, ರೋಣದ ಡಿ ಪೌಲ್ ಅಕಾಡೆಮಿ ಹಾಗೂ ನರಗುಂದದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಸೋಮವಾರ ಸುಸೂತ್ರವಾಗಿ ನಡೆಯಿತು.

ಲೋಕಸಭಾ ಚುನಾವಣೆ ಸಂಬಂಧ ಜಿಲ್ಲೆಯ 961 ಮತಗಟ್ಟೆಗಳಿಗೆ ನಿಯೋಜಿಸಿರುವ ಎಲ್ಲಾ ಹಂತದ ಮತಗಟ್ಟೆ ಅಧಿಕಾರಿಗಳು ಮಸ್ಟರಿಂಗ್ ಕೇಂದ್ರಕ್ಕೆ ಆಗಮಿಸಿ ತಮಗೆ ಹಂಚಿಕೆಯಾದ ಮತಗಟ್ಟೆಯ ಸಂಖ್ಯೆಯನ್ನು ತಿಳಿದುಕೊಂಡು,ನಿಗದಿಪಡಿಸಿದ ಕೌಂಟರ್‌ಗೆ ತೆರಳಿ ತಮ್ಮ ಮತಗಟ್ಟೆಗೆ ನಿಯೋಜಿಸಿರುವ ಮತಗಟ್ಟೆ ಅಧಿಕಾರಿಗಳನ್ನು ಪರಿಚಯ ಮಾಡಿಕೊಂಡು ಪರಸ್ಪರ ಚರ್ಚಿಸಿದರು.





ಬಳಿಕ ಮತಗಟ್ಟೆ ಅಧಿಕಾರಿಗಳು ಸೆಕ್ಟರ್ ಅಧಿಕಾರಿಗಳಿಂದ ಚುನಾವಣೆ ಸಂಬಂಧ ಮಾಹಿತಿ ಪಡೆದು, ಮತಗಟ್ಟೆ ಕಾರ್ಯನಿರ್ವಹಣೆಯ ಸಾಮಗ್ರಿಗಳನ್ನು ಪಡೆದರು. ಚುನಾವಣಾ ಸಾಮಾನ್ಯ ವೀಕ್ಷಕರಾದ ಆದೇಶ್ ಟೈಟಮಾರೆ ಮಸ್ಟರಿಂಗ್ ಕೇಂದ್ರಕ್ಕೆ ಭೇಟಿ ನೀಡಿ ವೀಕ್ಷಿಸಿ ಮಾಹಿತಿ ಪಡೆದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಜಿ.ಪಂ ಸಿಇಒ ಎಸ್.ಭರತ್, ಹೆಚ್ಚುವರಿ ಜಿಲ್ಲಾಧಿಕಾರಿ ಸುರೇಖಾ ಇತರರು ಮಸ್ಟರಿಂಗ್ ಕೇಂದ್ರಕ್ಕೆ ಭೇಟಿ ನೀಡಿ ವೀಕ್ಷಿಸಿದರು.

ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ಗದಗ ನಗರ ಸೇರಿದಂತೆ ವಿವಿಧ ಮಸ್ಟರಿಂಗ್ ಕೇಂದ್ರಕ್ಕೆ ಭೇಟಿ ನೀಡಿ ಮತಗಟ್ಟೆ ಕೇಂದ್ರದಲ್ಲಿ ನಿರ್ವಹಿಸಬೇಕಾದ ಕಾರ್ಯ ವಿಧಾನದ ಬಗ್ಗೆ ಮಾರ್ಗದರ್ಶನ ನೀಡಿದರು. ಲೋಕಸಭಾ ಚುನಾವಣೆ ಸಂಬಂಧ ಜಿಲ್ಲೆಯಲ್ಲಿ 189 ಮಾರ್ಗಗಳನ್ನು ಗುರುತಿಸಲಾಗಿದ್ದು, ಈ ಮಾರ್ಗದಲ್ಲಿ 132 ಕೆಎಸ್‌ಆರ್‌ಟಿಸಿ ಬಸ್ಸುಗಳು, 82 ಜೀಪು, 22 ಮಿನಿ ಬಸ್‌ಗಳನ್ನು ನಿಯೋಜಿಸಲಾಗಿದೆ ಎಂದು ತಿಳಿಸಿದರು.

ಮತಗಟ್ಟೆ ಅಧಿಕಾರಿಗಳಿಗೆ ಆರೋಗ್ಯ ಕಿಟ್, ಕುಡಿಯುವ ನೀರಿನ ವ್ಯವಸ್ಥೆ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲಾಗಿದೆ ಎಂದರು.

ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಜಿ.ಪಂ ಸಿಇಒ ಎಸ್.ಭರತ್ ಮಾತನಾಡಿ, ಜಿಲ್ಲೆಯಲ್ಲಿ 35 ವಿಶೇಷ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. 20 ಸಖಿ ಬೂತ್‌ಗಳು, ತಲಾ 4 ಸಾಂಪ್ರದಾಯಿಕ, ವಿಶೇಷ ಚೇತನ ಮತಗಟ್ಟೆಗಳು, ಯುವ ಮತದಾರರ ಮತಗಟ್ಟೆಗಳು ಹಾಗೂ ಥೀಮ್ ಬೇಸ್ಡ್ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ ಎಂದು ಮಾಹಿತಿ ನೀಡಿದರಲ್ಲದೆ, ಈ ಬಾರಿ ಶೇಕಡಾವಾರು ಮತದಾನ ಹೆಚ್ಚಳಕ್ಕೆ ಸ್ವೀಪ್ ಸಮಿತಿ ವತಿಯಿಂದ ಹಲವು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಶೇಕಡಾವಾರು ಮತದಾನ ಹೆಚ್ಚಳಕ್ಕೆ ಶ್ರಮಿಸಲಾಗಿದೆ ಎಂದರು. ಉಪ ವಿಭಾಗಾಧಿಕಾರಿ ವೆಂಕಟೇಶ ನಾಯ್ಕ ಸೇರಿದಂತೆ ಇತರರು ಇದ್ದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಮಾತನಾಡಿ, ಜಿಲ್ಲೆಯಲ್ಲಿ ಶಾಂತಿಯುತವಾಗಿ ಚುನಾವಣೆ ನಡೆಸಲು ಅಗತ್ಯ ಬಂದೋಬಸ್ತ್ ಮಾಡಲಾಗಿದೆ. ಸುಮಾರು 2000 ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ. ಸೂಕ್ಷ್ಮ ಮತ್ತು ಅತೀ ಸೂಕ್ಷ್ಮ ಮತಗಟ್ಟೆಗಳಲ್ಲಿ ಹೆಚ್ಚಿನ ನಿಗಾ ವಹಿಸಲಾಗಿದೆ ಎಂದು ತಿಳಿಸಿದರು.



### ಮತಪೆಟ್ಟಿಗೆಗಳೊಂದಿಗೆ ಮತಗಟ್ಟೆಗಳತ್ತ ಸಾಗಿದ ಚುನಾವಣಾ ಸಿಬ್ಬಂದಿಗಳು

# ಇಂದಿನ ಮತದಾನೋತ್ಸವಕ್ಕೆ ಕ್ಷೇತ್ರ ಸಜ್ಜು

■ ವಿಜಯಸಾಕ್ಷಿ ಸುದ್ದಿ, ಗದಗ

ಹಾವೇರಿ-ಗದಗ ಹಾಗೂ ಬಾಗಲಕೋಟ ಲೋಕಸಭೆ ಚುನಾವಣಾ ಮತದಾನಕ್ಕೆ ಜಿಲ್ಲಾಡಳಿತ ಸಕಲ ಸಿದ್ಧತೆಗಳನ್ನು ಪೂರ್ಣಗೊಳಿಸಿದ್ದು, ಚುನಾವಣೆ ಕರ್ತವ್ಯಕ್ಕೆ ನಿಯೋಜನೆಗೊಂಡಿರುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಸೋಮವಾರ ಇವಿಎಂ ಯಂತ್ರಗಳೊಂದಿಗೆ ತಮ್ಮ ತಮ್ಮ ಮತಗಟ್ಟೆಗಳತ್ತ ಸಾಗಿದರು.

ಹಾವೇರಿ-ಗದಗ ಲೋಕಸಭೆ ಕ್ಷೇತ್ರದ ಶಿರಹಟ್ಟಿ, ರೋಣ ಮತ್ತು ಗದಗ ವಿಧಾನಸಭೆ ಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟು 741 ಹಾಗೂ ಬಾಗಲಕೋಟ ಲೋಕಸಭೆ ಕ್ಷೇತ್ರ ವ್ಯಾಪ್ತಿಯ ನರಗುಂದ ಮತಕ್ಷೇತ್ರದಲ್ಲಿ 220 ಸೇರಿದಂತೆ ಜಿಲ್ಲೆಯಲ್ಲಿ ಒಟ್ಟು 961 ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಚುನಾವಣಾ ಆಯೋಗದ ಸೂಚನೆಯಂತೆ ಎಲ್ಲ ಮತಗಟ್ಟೆಗಳಲ್ಲಿ ವೆಬ್ ಕಾಸ್ಟಿಂಗ್ ವ್ಯವಸ್ಥೆ ಮಾಡಲಾಗಿದೆ.







ಜಿಲ್ಲೆಯಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಾದ ನಂತರ ಈವರೆಗೆ ಕೇವಲ 1 ಪ್ರಕರಣ ದಾಖಲಾಗಿದ್ದು, ಅಬಕಾರಿ ಕಾಯ್ದೆ ಉಲ್ಲಂಘನೆಯಡಿ 53 ಪ್ರಕರಣ ದಾಖಲಾಗಿದೆ. ಒಟ್ಟು 62,58,560 ರೂ. ನಗದು, 37,87,668 ರೂ. ಮೌಲ್ಯದ 13727.765 ಲೀಟರ್ ಮದ್ಯ ವಶಪಡಿಸಿಕೊಳ್ಳಲಾಗಿದೆ.

ಲೋಕಸಭೆ ಚುನಾವಣೆಯಲ್ಲಿ ಈ ಬಾರಿ 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಗೆ ಮನೆಯಿಂದಲೇ ಮತದಾನ ಮಾಡುವ ಅವಕಾಶ ಕಲ್ಪಿಸಲಾಗಿತ್ತು. ಆ ಪೈಕಿ ಜಿಲ್ಲೆಯಲ್ಲಿ ದಾಖಲೆಯ ಶೇ. 96.56ರಷ್ಟು ಮತದಾನವಾಗಿದೆ. ಅಂತೆಯೇ ವಿಶೇಷ ಚೇತನರು ಶೇ. 96.46ರಷ್ಟು ಮತ ಚಲಾಯಿಸಿದ್ದಾರೆ.

ಜಿಲ್ಲೆಯ ಶಿರಹಟ್ಟಿ ಕ್ಷೇತ್ರದಲ್ಲಿ ನೋಂದಣಿಯಾಗಿದ್ದ 100 ಹಿರಿಯ ಮತದಾರರಲ್ಲಿ 95, ಗದಗ-118ರಲ್ಲಿ 113, ರೋಣ-168ರಲ್ಲಿ 158, ನರಗುಂದ-83ರಲ್ಲಿ 78 ಹಿರಿಯರು ಮನೆಯಿಂದಲೇ ಮತ ಚಲಾಯಿಸಿದ್ದು, ಒಟ್ಟೂ 469 ನೋದಾಯಿತ ಹಿರಿಯ ಮತದಾರರಲ್ಲಿ 444 ಮತದಾರರು ಮತ ಚಲಾಯಿಸಿ ಶೇ. 94.67ರಷ್ಟು ಮತದಾನ ದಾಖಲಿಸಿದ್ದಾರೆ.

### ಥೀಮ್ ಮತಗಟ್ಟೆಗೆ ಭೇಟಿ ನೀಡಿ ವೀಕ್ಷಿಸಿದ ಇಓ ವಿಶ್ವನಾಥ ಹೊಸಮನಿ

# ಮತದಾನ ಪ್ರಜಾಪ್ರಭುತ್ವದ ಮೈಲುಗಲ್ಲು

■ ವಿಜಯಸಾಕ್ಷಿ ಸುದ್ದಿ, ಡಂಬಳ

ಮಹತ್ವಪೂರ್ಣವಾದ, ನಮ್ಮ ನಿಮ್ಮೆಲ್ಲರ ಭವಿಷ್ಯದ ನಿಧಿಯಾಗಿರುವ ಸಂವಿಧಾನ ಕಲ್ಪಿಸಿರುವ ಪ್ರಜಾಪ್ರಭುತ್ವದ ಮೈಲುಗಲ್ಲು, ಅಮೂಲ್ಯವಾದ ಮತದಾನದಲ್ಲಿ ಎಲ್ಲರೂ ಪಾಲ್ಗೊಳ್ಳುವುದರ ಜೊತೆ-ಗೆ ದೇಶದ ಶಕ್ತಿಯನ್ನು ಗಟ್ಟಿಗೊಳಿಸಲು ಮುಂದಾಗಬೇಕು ಎಂದು ಮುಂಡರಗಿ ಇಒ ವಿಶ್ವನಾಥ ಹೊಸಮನಿ ಕರೆ ನೀಡಿದರು.





ಡಂಬಳ ಗ್ರಾಮದ ಸರಕಾರಿ ಹೆಣ್ಣು ಮಕ್ಕಳ ಶಾಲೆಯಲ್ಲಿ 18ನೇ ಲೋಕಸಭಾ ಚುನಾವಣೆಯ 543 ಸ್ಥಾನಗಳಿಗೆ ದೇಶಾದ್ಯಂತ 7 ಹಂತದಲ್ಲಿ ಜರುಗುತ್ತಿರುವ ಚುನಾವಣೆಯ 2ನೇ ಹಂತದಲ್ಲಿ ಜರಗುತ್ತಿರುವ ಹಿನ್ನೆಲೆಯಲ್ಲಿ ಸಿಂಗರಿಸಲ್ಪಟ್ಟ 232 ಥೀಮ್ ಮತಗಟ್ಟೆಗೆ ಭೇಟಿ ನೀಡಿ ಅವರು ಮಾತನಾಡಿದರು.

ಶಿರಹಟ್ಟಿ ಮತಕ್ಷೇತ್ರದ ಮುಂಡರಗಿ ತಾಲೂಕಿನ 8 ಗ್ರಾ.ಪಂಗಳಲ್ಲಿ 61 ಬೂತ್‌ಗಳು, ರೋಣ ಮತಕ್ಷೇತ್ರದ ಡಂಬಳ ಹೋಬಳಿಯ 11 ಗ್ರಾ.ಪಂ ವ್ಯಾಪ್ತಿಯಲ್ಲಿ 61 ಮತಗಟ್ಟೆಗಳು ಇದ್ದು, ಅದರಲ್ಲಿ ಶಿವಾಜಿ ನಗರದ 215ನೇ ಮತದಾನ ಕೇಂದ್ರವನ್ನು ಯುವ ಮತಗಟ್ಟೆ ಕೇಂದ್ರ, ಡೋಣಿ ಗ್ರಾಮದ 241ನೇ ಮತಗಟ್ಟೆ ಸಖಿ ಮತಗಟ್ಟೆ, ಡಂಬಳ ಗ್ರಾಮದ ಸರಕಾರಿ ಹೆಣ್ಣುಮಕ್ಕಳ ಶಾಲೆಯ 232 ಮತಗಟ್ಟೆ ಕೇಂದ್ರವನ್ನು ಏಕತೆ ಸಾರುವ ಥೀಮ್ ಮತಗಟ್ಟೆ, ಮುಂಡರಗಿ ನಗರದಲ್ಲಿ ಗಾಂಧಿ ಸಮುದಾಯ ಭವನ ಮತ್ತು ಕೋಟೆ ಶಾಲೆಯಲ್ಲಿ ಸಖಿ ಮತಗಟ್ಟೆಯನ್ನಾಗಿಸಿದೆ.

ಮುಂಜಾನೆ 7 ಗಂಟೆಯಿಂದ ಪ್ರಾರಂಭವಾಗಿ ಸಂಜೆ 6 ಗಂಟೆಯವರೆಗೆ ಮತದಾನ ಪ್ರಕ್ರಿಯೆ ಜರುಗಲಿದ್ದು,ಎಲ್ಲರೂ ಮತದಾನದ ಮತೋತ್ಸವದಲ್ಲಿ ಪಾಲ್ಗೊಂಡು ಸಂತೋಷದಿಂದ ಮತದಾನದ ಹಕ್ಕನ್ನು ಚಲಾಯಿಸಿ. ನಿಮ್ಮ ಜವಾಬ್ದಾರಿಯನ್ನು ಮರೆಯದಿರಿ, ಬೇರೆಯವರಿಗೂ ಮತದಾನದಲ್ಲಿ ಪಾಲಗೊಳ್ಳುವಂತೆ ಪ್ರೇರೇಪಿಸಿ ಎಂದು ಹೇಳಿದರು.

ಪಂಚಾಯತ ರಾಜ್ ಸಹಾಯಕ್ಕ ನಿರ್ದೇಶಕ ಪ್ರವೀಣ ಗೋಣೆಮ್ಮನವರ, ಡಂಬಳ ಭಾಗದ ಪೊಲೀಸ್ ಚುನಾವಣಾ ಸೆಕ್ಟರ್ ಅಧಿಕಾರಿ ಎಎಸ್‌ಐ ಮಾರುತಿ ಜೋಗದಂಡಕರ, ತಾ.ಪಂ ವ್ಯವಸ್ಥಾಪ ಫಕ್ರುದ್ದಿನ್ ನಧಾಫ್, ಶಾಲಾ ಮುಖ್ಯೋಪಾಧ್ಯಾಯರು, ಗುರುವೃಂದ, ಗ್ರಾ.ಪಂ ಸಿಬ್ಬಂದಿ ವರ್ಗದವರು ಇದ್ದರು.

ಪಿಡಿಒ ಶಶಿಧರ ಎಮ್.ಹೊಂಬಳ ಮಾತನಾಡಿ, ಪ್ರಜಾಪ್ರಭುತ್ವವುಳ್ಳ ನಮ್ಮ ದೇಶದ ಪ್ರತಿಯೊಬ್ಬ ನಾಗರಿಕರಿಗೆ ಕಲ್ಪಿಸಿಕೊಟ್ಟಿರುವ ಅಮೂಲ್ಯವಾದ ಮತದಾನದ ಮೂಲಭೂತ ಹಕ್ಕನ್ನು ಚಲಾಯಿಸಬೇಕು. ಪ್ರಜಾಪ್ರಭುತ್ವದಲ್ಲಿ ಜನಪ್ರತಿನಿಧಿಗಳನ್ನು ಆಯ್ಕೆ ಮಾಡುವ ಅಧಿಕಾರ ಪಡೆದುಕೊಂಡಿರುವ ಎಲ್ಲಾ ಮತದಾರರು ಮತ ಚಲಾಯಿಸಬೇಕು. ಯಾರೂ ಕೂಡಾ ನಿಷ್ಕಾಳಜಿಯನ್ನು ತೋರದೆ ಮತ ಚಲಾಯಿಸಬೇಕು ಎಂದು ಹೇಳಿದರು.

## ಸಂಪಾದಕೀಯ

### ದಕ್ಷಿಣಕ್ಕೆ ಉತ್ತರವಾಗಲಿ ಮತದಾನ ಪ್ರಮಾಣ

ಕರ್ನಾಟಕದಲ್ಲಿ ನಡೆಯುತ್ತಿರುವ ಲೋಕಸಭೆ ಚುನಾವಣೆಯ ಎರಡನೇ ಹಂತದ ಮತದಾನ ಇಂದು ನಡೆಯಲಿದೆ. ಲೋಕಸಭೆ ಚುನಾವಣೆ ಎನ್ನುವುದು ದೇಶದ ಭವಿಷ್ಯವನ್ನು ನಿರ್ಧರಿಸುವ ಮಹತ್ವದ ಚುನಾವಣೆ. ಮತದಾನದ ಈ ಹಬ್ಬದಲ್ಲಿ ಪ್ರತಿಯೊಬ್ಬರು ಭಾಗಿಯಾಗಿ, ಬಲಿಷ್ಠ ರಾಷ್ಟ್ರ ನಿರ್ಮಾಣಕ್ಕೆ ಪ್ರತಿಯೊಬ್ಬರು ಕೈಜೋಡಿಸಬೇಕು.

ರಾಜ್ಯದಲ್ಲಿ ನಡೆದ ಮೊದಲ ಹಂತದ ಚುನಾವಣೆ ಈಗಾಗಲೇ ಪೂರ್ಣಗೊಂಡಿದೆ. ಪ್ರಜ್ಞಾವಂತರೇ ಹೆಚ್ಚಿರುವ ಮತ್ತು ಅಭಿವೃದ್ಧಿ ಹೊಂದಿರುವ ಜಿಲ್ಲೆಗಳ ಸಾಲಿನಲ್ಲಿ ಗುರುತಿಸಿಕೊಂಡಿರುವ ದಕ್ಷಿಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಮತದಾನ ಪ್ರಮಾಣವನ್ನ ನಾವೆಲ್ಲರೂ ನೋಡಿದ್ದೇವೆ.

ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಶೇಕಡ 50ಕ್ಕಿಂತ ಹೆಚ್ಚು ಮತದಾನ ಆಗಿಲ್ಲ. ಮಂಡ್ಯ ಹೊರತುಪಡಿಸಿದರೆ ದಕ್ಷಿಣ ಕರ್ನಾಟಕ ಭಾಗದ 14 ಜಿಲ್ಲೆಗಳಲ್ಲಿ ಮತದಾನ ಪ್ರಮಾಣ ಅಂತ ಹೇಳಿಕೊಳ್ಳುವಂತೇನಿಲ್ಲ. ಪ್ರಜಾಪ್ರಭುತ್ವ ಗಟ್ಟಿಗೊಳ್ಳಬೇಕಾದರೆ ಮತದಾನ ಕಡ್ಡಾಯಬೇಕು. ಪ್ರತಿಯೊಬ್ಬರು ಮತದಾನ ಮಾಡಬೇಕು ಮತದಾನ ಪ್ರಮಾಣ ಶೇಕಡಾ 100ರಷ್ಟು ಆಗಬೇಕು.

ಆದರೆ ಸದ್ಯ ಮತದಾನ ಪ್ರಮಾಣ ತೀರಾ ಕಳಪೆಯಾಗಿದೆ. ಮತದಾನ ಜಾಗೃತಿ ಸಾಕಷ್ಟು ನಡೆದರೂ ಪ್ರಜ್ಞಾವಂತರೆ ಮತದಾನದಿಂದ ದೂರ ಉಳಿಯುತ್ತಿರುವುದು ಸ್ಪಷ್ಟವಾಗುತ್ತಿದೆ. ಈ ಮನಸ್ಥಿತಿ ಬದಲಾಗಬೇಕು. ಕನಿಷ್ಠ ಪಕ್ಷ ಉತ್ತರ ಕರ್ನಾಟಕ ಭಾಗದ 14 ಕ್ಷೇತ್ರಗಳ ಚುನಾವಣೆಯಲ್ಲಾದರೂ ಬದಲಾಗಬೇಕು.

ಉತ್ತರ ಕರ್ನಾಟಕ ಭಾಗದಲ್ಲಿ ಸದ್ಯ ಸುಡು ಬಿಸಿಲಿನ ಸಮಯ. 45 ಡಿಗ್ರಿ ಉಷ್ಣಾಂಶದ ಮಧ್ಯೆ ಜನ ಮತದಾನ ಮಾಡಬೇಕಿದೆ. ಚುನಾವಣಾ ಸಿಬ್ಬಂದಿ ಬೆವರುತ್ತಲೇ ಮತದಾನವನ್ನ ನಡೆಸಿಕೊಡಬೇಕಿದೆ. ಮತದಾನ ಹೆಚ್ಚಳ ಆಗದಿರಲು ಸದ್ಯದ ವಾತಾವರಣವೂ ಕಾರಣ.

ಆದರೆ ಅದೆಲ್ಲವನ್ನು ಮೀರಿ ಮತದಾನ ಮಾಡಬೇಕಿದೆ. ಉತ್ತರ ಕರ್ನಾಟಕ ಭಾಗದಲ್ಲಿ ಆಗುವ ಮತದಾನದ ಪ್ರಮಾಣ, ದಕ್ಷಿಣ ಕರ್ನಾಟಕದ ಮತದಾರರಿಗೆ ಮುಂದಿನ ದಿನಗಳಲ್ಲಿ ಪ್ರೇರಣೆ ಆಗಲಿ. ಪ್ರೇರಣೆ ನೀಡುವಷ್ಟು ಮತದಾನವು ಆಗಲಿ.

**ಇಂದು ಲೋಕಸಭಾ ಚುನಾವಣೆಯ 2ನೇ ಹಂತದ ಮತದಾನ ಪ್ರಕ್ರಿಯೆಯ ಪ್ರಯುಕ್ತ ವಿಶೇಷ ಲೇಖನ**

# ಮತದಾನದ ಐತಿಹಾಸಿಕ ಹಿನ್ನೆಲೆಯ ಮಹತ್ವ

ಮತದಾನದ ಹಕ್ಕು ಭಾರತದ ಸಂವಿಧಾನವು ಖಾತರಿಪಡಿಸಿದ ಮೂಲಭೂತ ಹಕ್ಕು. ಸಂವಿಧಾನವು ಭಾರತದ ಪ್ರತಿಯೊಬ್ಬ ನಾಗರಿಕರಿಗೂ ಚುನಾವಣಾ ಪ್ರಕ್ರಿಯೆಯಲ್ಲಿ ಭಾಗವಹಿಸುವ, ಸಂಸತ್ತು ಮತ್ತು ರಾಜ್ಯ ಶಾಸಕಾಂಗಗಳಿಗೆ ಪ್ರತಿನಿಧಿಗಳನ್ನು ಆಯ್ಕೆ ಮಾಡುವ ಹಕ್ಕನ್ನು ನೀಡುತ್ತದೆ. ಮತದಾನದ ಹಕ್ಕನ್ನು ಸಂವಿಧಾನದ 326ನೇ ವಿಧಿಯಲ್ಲಿ ಪ್ರತಿಪಾದಿಸಲಾಗಿದೆ ಮತ್ತು ಇದು ಭಾರತದ ಪ್ರಜಾಪ್ರಭುತ್ವ ವ್ಯವಸ್ಥೆಯ ಮೂಲಾಧಾರವಾಗಿದೆ.



1947ರಲ್ಲಿ ದೇಶವು ಬ್ರಿಟಿಷ್ ಆಳ್ವಿಕೆಯಿಂದ ಸ್ವಾತಂತ್ರ್ಯ ಪಡೆದ ನಂತರ ಭಾರತದಲ್ಲಿ ಮತದಾನದ ಹಕ್ಕು ಮಹತ್ವದ ಐತಿಹಾಸಿಕ ಬೆಳವಣಿಗೆಯನ್ನು ಕಂಡಿದೆ. 26 ಜನವರಿ 1950ರಂದು ಜಾರಿಗೆ ಬಂದ ಭಾರತೀಯ ಸಂವಿಧಾನವು ಸಾರ್ವತ್ರಿಕ ವಯಸ್ಕ ಮತದಾನದ ಆಧಾರದ ಮೇಲೆ ಮತದಾನದ ಹಕ್ಕನ್ನು ಮೂಲಭೂತ ಹಕ್ಕು ಎಂದು ಒದಗಿಸಿದೆ. ಇದು ಭಾರತದಲ್ಲಿ ಪ್ರಜಾಸತ್ತಾತ್ಮಕ ಆಡಳಿತ ವ್ಯವಸ್ಥೆಯನ್ನು ಸ್ಥಾಪಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿತ್ತು. ಭಾರತದಲ್ಲಿ ಮೊದಲ ಸಾರ್ವತ್ರಿಕ ಚುನಾವಣೆಗಳು 1951–52ರಲ್ಲಿ ನಡೆದವು ಮತ್ತು ಸಾರ್ವತ್ರಿಕ ವಯಸ್ಕ ಮತದಾನದ ಆಧಾರದ ಮೇಲೆ ನಡೆಸಲಾಯಿತು. ಈ ಚುನಾವಣೆಗಳು ಭಾರತದಲ್ಲಿ ಪ್ರಜಾಸತ್ತಾತ್ಮಕ ಸರ್ಕಾರದ ಸ್ಥಾಪನೆಯನ್ನು ಗುರುತಿಸಿದವು ಮತ್ತು ಜನರಿಗೆ ರಾಜಕೀಯ ಸಬಲೀಕರಣದ ಹೊಸ ಯುಗವನ್ನು ಪ್ರಾರಂಭಿಸಿದವು.

2005ರಲ್ಲಿ ಜಾರಿಯಾದ ಮಾಹಿತಿ ಹಕ್ಕು ಕಾಯ್ದೆಯು ಚುನಾವಣಾ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಹೆಚ್ಚಿಸುವಲ್ಲಿ ಪ್ರಮುಖ ಪಾತ್ರ ವಹಿಸಿದೆ. ಇದು ಚುನಾವಣೆಯಲ್ಲಿ ವಂಚನೆ, ಕುಶಲತೆ ಮತ್ತು ಇತರ ರೀತಿಯ ಹಸ್ತಕ್ಷೇಪಗಳ ವ್ಯಾಪ್ತಿಯನ್ನು ಕಡಿಮೆ ಮಾಡಲು ಸಹಾಯ ಮಾಡಿದೆ. ಸಂವಿಧಾನವು ಭಾರತದ ಚುನಾವಣಾ ಆಯೋಗವನ್ನು ಸಹ ಸ್ಥಾಪಿಸುತ್ತದೆ, ಇದು ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆಗಳನ್ನು ನಡೆಸಲು ಮತ್ತು ಚುನಾವಣಾ ಪ್ರಕ್ರಿಯೆಯ ಸಮಗ್ರತೆಯನ್ನು ಖಾತ್ರಿಪಡಿಸುವ ಜವಾಬ್ದಾರಿಯನ್ನು ಹೊಂದಿದೆ.

ಭಾರತದಲ್ಲಿ ಮತದಾನದ ಹಕ್ಕು ಅಪಾರ ಪ್ರಾಮುಖ್ಯತೆಯನ್ನು ಹೊಂದಿದೆ. ಏಕೆಂದರೆ ಇದು ಭಾರತದ ಪ್ರಜಾಪ್ರಭುತ್ವ ವ್ಯವಸ್ಥೆಯ ಮೂಲಾಧಾರ. ಇದು ನಾಗರಿಕರಿಗೆ ದೇಶದ ನಿರ್ಧಾರ ತೆಗೆದುಕೊಳ್ಳುವ ಪ್ರಕ್ರಿಯೆಯಲ್ಲಿ ಭಾಗವಹಿಸಲು ಮತ್ತು ಅವರ ಚುನಾಯಿತ ಪ್ರತಿನಿಧಿಗಳನ್ನು ಹೊಣೆಗಾರರನ್ನಾಗಿ ಮಾಡಲು ಅವಕಾಶವನ್ನು ಒದಗಿಸುತ್ತದೆ.




ವಿಧಿ 324, ಭಾರತದ ಚುನಾವಣಾ ಆಯೋಗಕ್ಕೆ ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆಗಳನ್ನು ಮೇಲ್ವಿಚಾರಣೆ ಮಾಡುವ ಮತ್ತು ನಡೆಸುವ ಅಧಿಕಾರವನ್ನು ನೀಡುತ್ತದೆ. ಇದು ಚುನಾವಣೆಗಳನ್ನು ಪಾರದರ್ಶಕ ಮತ್ತು ನಿಷ್ಪಕ್ಷಪಾತ ರೀತಿಯಲ್ಲಿ ನಡೆಸುವುದನ್ನು ಖಚಿತಪಡಿಸುತ್ತದೆ. ಭಾರತದಲ್ಲಿ ಮತದಾನದ ಹಕ್ಕಿನ ಹೆಗ್ಗುರುತು ಪ್ರಕರಣಗಳು ಮತದಾನದ ಹಕ್ಕನ್ನು ಸಾಂವಿಧಾನಿಕ ಹಕ್ಕು ಎಂಬ ವ್ಯಾಖ್ಯಾನವನ್ನು ರೂಪಿಸಿದ ಹಲವಾರು ಹೆಗ್ಗುರುತು ಪ್ರಕರಣಗಳು ಭಾರತದಲ್ಲಿ ನಡೆದಿವೆ.

ಬಹು ಮಹತ್ವಪೂರ್ಣ ಐತಿಹಾಸಿಕ ಹಿನ್ನೆಲೆಯ ಮಹತ್ವವನ್ನು ಹೊಂದಿರುವ ಮತದಾನದ ಹಕ್ಕನ್ನು ಪ್ರಜ್ಞಾವಂತ ನಾಗರಿಕರಾದ ನಾವು–ನೀವೆಲ್ಲರೂ ಸಮಸ್ತ ಭಾರತ ದೇಶದಲ್ಲಿನ ನಾಗರಿಕರ ಸಾಮಾಜಿಕ, ಆರ್ಥಿಕ, ಸೈಕ್ಷಣಿಕ, ಮತ್ತು ನೈತಿಕ ಶ್ರೇಯೋಭೀವೃದ್ಧಿಯನ್ನು ಗಮನಾಹ್ರವಾಗಿ ಮನದಟ್ಟು ಮಾಡಿಕೊಂಡು ಸಮಸ್ತ ರಾಷ್ಟ್ರದಲ್ಲಿ ಸುಭದ್ರ ಸರಕಾರದ ರಚನೆಯಲ್ಲಿ ಪ್ರತಿಯೊಬ್ಬ ನಾಗರಿಕರ ಮತದಾನವು ಮಹತ್ವದ ನಿರ್ಣಾಯಕ ಪಾತ್ರವಹಿಸುವುದರಿಂದ ನಾಡಿನ ಪ್ರತಿಯೊಬ್ಬ ನಾಗರಿಕನು ಲೋಕಸಭಾ ಚುನಾವಣೆಯ ಎರಡನೇ ಹಂತದ ಮತದಾನದ ಪ್ರಕ್ರಿಯೆಯಲ್ಲಿ ಭಾಗವಹಿಸಿ ಯಾವುದೇ ಆಸೆ–ಆಮಿಷಗಳಿಗೆ ಮಾರುಹೋಗದೇ ಮುಕ್ತ ಮನಸ್ಸಿನಿಂದ ಮತದಾನ ಮಾಡಿ, ಸುಭದ್ರ ರಾಷ್ಟ್ರ ನಿರ್ಮಾಣಕ್ಕೆ ಕಾರಣೀಭೂತರಾಗ ಬೇಕಾಗಿರುವುದು ಎಲ್ಲರ ಆದ್ಯ ಕರ್ತವ್ಯವಾಗಿದೆ.



**– ಸಹನಾ ರಾಘವೇಂದ್ರ ಪಾಲನಕರ.**
**ಅಧ್ಯಕ್ಷರು, ಸೌಜನ್ಯತಾ ಸಮಗ್ರ ನಾಗರಿಕ ಹಿತರಕ್ಷಣಾ ಸಮಿತಿ ಗದಗ.**

**ಆರ್‌ಟಿಐ ಕಾರ್ಯಕರ್ತ ಅಮಿತ್ ಜೇತ್ವಾ ಹತ್ಯೆ ಪ್ರಕರಣ**

## ಆರೋಪಿಗಳನ್ನು ಖುಲಾಸೆಗೊಳಿಸಿದ ಹೈಕೋರ್ಟ್

■ವಿಜಯಸಾಕ್ಷಿ ಸುದ್ದಿ, ಗುಜರಾತ್



ಆರ್‌ಟಿಐ ಕಾರ್ಯಕರ್ತ ಮತ್ತು ಪರಿಸರವಾದಿ ಅಮಿತ್ ಜೇತ್ವಾ ಹತ್ಯೆ ಪ್ರಕರಣದಲ್ಲಿ ಜುನಾಗಡದ ಬಿಜೆಪಿಯ ಮಾಜಿ ಸಂಸದ ದಿನು ಬೋಘಾ ಸೋಲಂಕಿ ಮತ್ತು ಇತರ ಆರು ಜನರನ್ನು ಗುಜರಾತ್ ಹೈಕೋರ್ಟ್ ಖುಲಾಸೆಗೊಳಿಸಿದೆ.

ನ್ಯಾಯಮೂರ್ತಿಗಳಾದ ಎಎಸ್ ಸುಪೇಹಿಯಾ ಮತ್ತು ವಿಮಲ್ ಕೆ ವ್ಯಾಸ್ ಅವರ ಪೀಠ ಇಂದು ಸತ್ಯಮೇವ ಜಯತೇ. ಸತ್ಯಕ್ಕೆ ಜಯ ಸಿಗಬೇಕು ಎಂದು ದಿನು ಬೋಘಾ ಸೋಲಂಕಿ ಸೇರಿದಂತೆ ಇತರ ಆರೋಪಿಗಳನ್ನು ಪ್ರಕರಣದಲ್ಲಿ ಖುಲಾಸೆಗೊಳಿಸುವಾಗ ಹೇಳಿದೆ.

ನ್ಯಾಯಾಲಯವು ತನ್ನ ತೀರ್ಪಿನಲ್ಲಿ, ಪ್ರಕರಣವನ್ನು ಪೊಲೀಸರು ಮತ್ತು ವಿಚಾರಣಾ ನ್ಯಾಯಾಲಯವು ನಿರ್ವಹಿಸಿದ ರೀತಿಯನ್ನು ಟೀಕಿಸಿದೆ. ಸತ್ಯವನ್ನು ಸಮಾಧಿ ಮಾಡಲು ಎಲ್ಲಾ ಪ್ರಯತ್ನಗಳನ್ನು ಮಾಡಲಾಗಿದೆ ಎಂದು ಹೈಕೋರ್ಟ್ ಟೀಕಿಸಿದೆ. ಅಪರಾಧದ ತನಿಖೆಯು ಆರಂಭದಿಂದಲೂ ಕಾಟಾಚಾರದಿಂದ ಕೂಡಿದೆ ಮತ್ತು ಪೂರ್ವಾಗ್ರಹ ಪೀಡಿತವಾಗಿತ್ತು. ಸಾಕ್ಷಿಗಳ ವಿಶ್ವಾಸವನ್ನು ಗಳಿಸುವಲ್ಲಿ ಪ್ರಾಸಿಕ್ಯೂಷನ್ ವಿಫಲಗೊಂಡಿದೆ. ಕೊಲೆ ನಡೆದಾಗ ದೂರುದಾರ ಪೊಲೀಸ್ ಕಾನ್‌ಸ್ಟೇಬಲ್ ಸ್ಥಳದಲ್ಲಿದ್ದರು, ಅವರು ಓಡಿ ಪರಾರಿಯಾಗುತ್ತಿದ್ದ ದಾಳಿಕೋರರನ್ನು ಬೆನ್ನಟ್ಟಿದ್ದರು. ಮೊದಲ ತನಿಖಾಧಿಕಾರಿ ಕೇವಲ 55 ಸೆಕೆಂಡ್‌ಗಳಲ್ಲಿ ಮತ್ತು ಹಿರಿಯ ಪೊಲೀಸ್ ಅಧಿಕಾರಿ 20 ನಿಮಿಷಗಳಲ್ಲಿ ಘಟನಾ ಸ್ಥಳವನ್ನು ತಲುಪಿದ್ದರು, ಆದರೆ ದಾಳಿಕೋರರನ್ನು ತಕ್ಷಣಕ್ಕೆ ಬಂಧಿಸಲು ಸಾಧ್ಯವಾಗದಿರುವುದು ದಿಗ್ಭ್ರಮೆಯನ್ನು ಮೂಡಿಸಿದೆ ಮತ್ತು ಸತ್ಯವನ್ನು ಮುಚ್ಚಿ ಹಾಕಲು ಎಲ್ಲ ಪ್ರಯತ್ನಗಳನ್ನು ಮಾಡಲಾಗಿದೆ. ದೋಷಿಯೆಂದು ಹೇಳಿದ ಜುಲೈ 11, 2019ರ ಕೆಳ ನ್ಯಾಯಾಲಯದ ತೀರ್ಪನ್ನು ನಾವು ರದ್ದುಗೊಳಿಸಿದ್ದೇವೆ, ಮೇಲ್ಮನವಿದಾರರನ್ನು ನಾವು ದೋಷಮುಕ್ತಗೊಳಿಸುತ್ತೇವೆ ಎಂದು ನ್ಯಾಯಾಲಯ ಹೇಳಿದೆ.

ಅಮಿತ್ ಜೇಥ್ವಾ ಅವರು ಆರ್‌ಟಿಐ ಕಾರ್ಯಕರ್ತ ಮತ್ತು ಪರಿಸರವಾದಿಯಾಗಿದ್ದಾರೆ. ಅವರು ಆರ್‌ಟಿಐಯಡಿ ಮಾಹಿತಿಗಳನ್ನು ಪಡೆದು ಅಕ್ರಮ ಗಣಿಗಾರಿಕೆಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಪ್ರಕರಣಗಳನ್ನು ದಾಖಲಿಸುತ್ತಿದ್ದರು. ಅವರನ್ನು 2010ರ ಜುಲೈನಲ್ಲಿ ಗುಜರಾತ್ ಹೈಕೋರ್ಟಿನ ಗೇಟ್‌ನ ಹೊರಗಡೆ ಮೋಟಾರ್ ಬೈಕಿನಲ್ಲಿ ಬಂದ ಇಬ್ಬರು ದುಷ್ಕರ್ಮಿಗಳು ಗುಂಡಿಕ್ಕಿ ಹತ್ಯೆ ಮಾಡಿದ್ದರು. ಅವರ ಹತ್ಯೆಗೆ ಸುಮಾರು ಒಂದು ತಿಂಗಳ ಮೊದಲು, ಅವರು ಗಿರ್ ಅರಣ್ಯದ ಸುತ್ತ ಅಕ್ರಮ ಗಣಿಗಾರಿಕೆ ಬಗ್ಗೆ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಬಿಜೆಪಿಯ ಮಾಜಿ ಸಂಸದ ಸೋಲಂಕಿ ಅಕ್ರಮ ಗಣಿಗಾರಿಕೆ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದಾರೆ ಎಂಬ ಬಗ್ಗೆ ಅವರು ದಾಖಲೆಯನ್ನು ಕೂಡ ಕೋರ್ಟ್‌ಗೆ ಸಲ್ಲಿಸಿದ್ದರು.

**ಸುಶಿಕ್ಷಿತರ ಅಸಡ್ಡೆಯೇ ಪ್ರಜಾಪ್ರಭುತ್ವಕ್ಕೆ ಮಾರಕ**

# ಎಲ್ಲರೂ ಕಡ್ಡಾಯವಾಗಿ ಮತ ಚಲಾಯಿಸಲಿ

ಪ್ರಜಾಪ್ರಭುತ್ವ ಎಂಬ ಆಡಳಿತ ಪದ್ಧತಿಯನ್ನು ಅಳವಡಿಸಿಕೊಂಡ ನಮಗೆ ಚುನಾವಣೆ ಎಂಬುದು ಹಬ್ಬವಲ್ಲ. ಬದಲಾಗಿ ದೇಶದ ಚುಕ್ಕಾಣಿಯನ್ನು ಯಾರ ಕೈಗೆ ನೀಡಬೇಕು ಎಂಬುದನ್ನು ನಿರ್ಧರಿಸುವ ಮಹತ್ತರ ದಿನ.

ದುರ್ದೈವದ ಸಂಗತಿ ಎಂದರೆ, ನಿರ್ಧಾರ ತಗೆದುಕೊಳ್ಳುವ ಈ ದಿನದಂದು ಸುಶಿಕ್ಷಿತರೆನಿಸಿಕೊಂಡವರೇ ಈ ಮಹತ್ಕಾರ್ಯದಿಂದ ದೂರ ಉಳಿಯುತ್ತಿರುವದು. ಎಲ್ಲಿಯವರೆಗೆ ಸುಶಿಕ್ಷಿತರು ಕಡ್ಡಾಯವಾಗಿ ಮತ ಚಲಾಯಿಸುವುದಿಲ್ಲವೋ, ಅಲ್ಲಿಯವರೆಗೆ ನಿಜವಾದ ಪ್ರಭುವಿನ ಆಯ್ಕೆ ಅಸಾಧ್ಯ. ಸಜ್ಜನನಾರು, ದುರ್ಜನನಾರು ಎಂಬ ವಿವೇಚನೆಯನ್ನು ಮಾಡಲಾರದವನ ಮತದಿಂದ ಚುನಾಯಿತನಾದ ವ್ಯಕ್ತಿಯಿಂದ ದೇಶ ಉದ್ದಾರವಾಗಲು ಹೇಗೆ ಸಾಧ್ಯ? ನಿಜ ಹೇಳಬೇಕೆಂದರೆ, ದೇಶ ಹಾಳಾಗುತ್ತಿರುವುದು ದುರ್ಜನರ ಅಟ್ಟಹಾಸದಿಂದಲ್ಲ, ಬದಲಾಗಿ ಸಜ್ಜನರ ಗಾಢ ಮೌನದಿಂದ.



ಬ್ರಿಟೀಷರು ನಮ್ಮ ದೇಶ ತೊರೆದು 75 ವರ್ಷ ಗತಿಸಿದರೂ ಬ್ರಿಟಿಷತ್ವ ಮಾತ್ರ ಹಾಗೇಯೇ ಬಳವಳಿಯಾಗಿ ನಮ್ಮ ರಕ್ತದಲ್ಲಿ ಸೇರಿಹೋಗಿದೆ. ಅಂದು ಬ್ರೀಟಿಷರ ಗುಲಾಮರಾಗಿದ್ದೆವು, ಇಂದು ರಾಜಕಾರಣಿಗಳ ಗುಲಾಮರಾಗಿದ್ದೇವೆ. ಗುಲಾಮಗಿರಿಯಿಂದ ಮುಕ್ತಿ ದೊರೆಯಬೇಕಾದರೆ ಹಣ, ಹೆಂಡದಂತಹ ಚಿಲ್ಲರೆ ಆಮಿಷಕ್ಕೆ ಬಲಿಯಾಗದೇ ಸೂಕ್ತ ಸಜ್ಜನ ವ್ಯಕ್ತಿಯನ್ನು ಆಯ್ಕೆ ಮಾಡಿ ಕಳುಹಿಸುವ ಮಹತ್ತರ ಜವಾಬ್ದಾರಿಯನ್ನು ನಿಭಾಯಿಸುವ ದಿನವೇ ಚುನಾವಣೆ.

ದುರ್ದೈವದ ಸಂಗತಿ ಎಂದರೆ ಬುದ್ಧಿ, ತಿಳುವಳಿಕೆ ಇರುವ ಮತದಾರ ಮತದಾನ ಮಾಡದೇ ಇರುವುದು ಹಾಗೂ ಬುದ್ಧಿ–ತಿಳುವಳಿಕೆ ಇರದ ಮತದಾರ ಕಡ್ಡಾಯವಾಗಿ ಮತದಾನ ಮಾಡುತ್ತಿರುವುದು. ಇದರ ಪರಿಣಾಮದಿಂದಾಗಿಯೇ IAS,IPS,KAS ನಂತಹ ಪದವಿ ಪಡೆದರೂ ಸಹ ಹೆಬ್ಬಟ್ಟಿನ ರಾಜ–ಕಾರಣಿ ಎದುರು ತಲೆ ತಗ್ಗಿಸಿ ನಿಂತುಕೊಳ್ಳಬೇಕಾದ ಪರಿಸ್ಥಿತಿ ಉದ್ಭವವಾಗಿದ್ದು.

ಆದ್ದರಿಂದ ಸುಶಿಕ್ಷಿತರು, ಪ್ರಜ್ಞಾವಂತರು ಮತದಾನ ದಿನದಂದು ರಜಾ ದಿನವೆಂದು ಭಾವಿಸದೇ, ಮೋಜು–ಮಸ್ತಿಯಲ್ಲಿ ಕಾಲ ಕಳೆಯದೇ ಕಡ್ಡಾಯವಾಗಿ ಮತ ಹಾಕಬೇಕು ಹಾಗೂ ಮತ ಹಾಕಿಸಬೇಕು. ನೂರು ಪ್ರತಿಶತ ಮತದಾನವಾದಾಗ ಮಾತ್ರ ನಿಜವಾದ ಸಮಾಜಮುಖಿ ಜನನಾಯಕ ದೊರೆಯಬಲ್ಲ.

**–ಮಂಜುನಾಥ ಚನ್ನಪ್ಪನವರ.**
**ಬೆಟಗೇರಿ–ಗದಗ.**



## ಪ್ರಜ್ವಲ್ ರೇವಣ್ಣ ಪೆನ್ ಡ್ರೈವ್ ಹಂಚಿಕೆ ಹಿಂದೆ ಡಿಕೆ ಶಿವಕುಮಾರ್: ವಕೀಲ ದೇವರಾಜೇಗೌಡ ಆರೋಪ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ದೇಶಾದ್ಯಂತ ಸದ್ದು ಮಾಡುತ್ತಿರುವ ಹಾಸನ ಸಂಸದ ಪ್ರಜ್ವಲ್ ರೇವಣ್ಣ ಪೆನ್ ಡ್ರೈವ್ ಹಂಚಿಕೆ ಹಿಂದೆ ಡಿಸಿಎಂ ಡಿಕೆ ಶಿವಕುಮಾರ್ ಅವರ ಕೈವಾಡದ ಆರೋಪ ಕೇಳಿಬಂದಿದೆ. ನಗರದ ಪ್ರೆಸ್ ಕ್ಲಬ್ ನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಹಾಸನದ ವಕೀಲ, ಬಿಜೆಪಿ ಮುಖಂಡ ದೇವರಾಜೇಗೌಡ ಈ ಆರೋಪ ಮಾಡಿದರು.

## ಹೇಮಂತ್ ಕರ್ಕರೆ ಆರೆಸ್ಸೆಸ್ ನಂಟಿನ ಪೊಲೀಸ್ ಅಧಿಕಾರಿಯ ಗುಂಡಿಗೆ ಬಲಿಯಾಗಿದ್ದು: ವಿಜಯ್ ವಡೆಟ್ಟಿವಾರ್

■ವಿಜಯಸಾಕ್ಷಿ ಸುದ್ದಿ, ಮುಂಬೈ

2008ರ ಮುಂಬೈ ಭಯೋತ್ಪಾದಕ ದಾಳಿಯ ಸಮಯದಲ್ಲಿ ರಾಜ್ಯ ಭಯೋತ್ಪಾದನಾ ನಿಗ್ರಹ ದಳದ(ಎಟಿಎಸ್) ಮಾಜಿ ಮುಖ್ಯಸ್ಥ ಹೇಮಂತ್ ಕರ್ಕರೆ ಅವರನ್ನು ಹತ್ಯೆಗೈದಿದ್ದು ಭಯೋತ್ಪಾದಕ ಅಜ್ಮಲ್ ಅಮೀರ್ ಕಸಬ್ ಅಲ್ಲ, ಆರೆಸ್ಸೆಸ್ ಜೊತೆ ನಂಟು ಹೊಂದಿದ್ದ ಪೊಲೀಸ್ ಅಧಿಕಾರಿ ಎಂದು ಮಹಾರಾಷ್ಟ್ರ ವಿರೋಧ ಪಕ್ಷದ ನಾಯಕ ಮತ್ತು ಕಾಂಗ್ರೆಸ್ ನಾಯಕ ವಿಜಯ್ ವಡೆಟ್ಟಿವಾರ್ ಗಂಭೀರವಾದ ಆರೋಪವನ್ನು ಮಾಡಿದ್ದಾರೆ.

1993ರ ಮುಂಬೈ ಸರಣಿ ಸ್ಫೋಟ ಮತ್ತು 26/11 ಮುಂಬೈ ದಾಳಿಯ ಪ್ರಕರಣಗಳಲ್ಲಿ ಉಜ್ವಲ್ ನಿಕಮ್ ವಿಶೇಷ ಪಬ್ಲಿಕ್ ಪ್ರಾಸಿಕ್ಯೂಟರ್ ಆಗಿ ಕೆಲಸ ಮಾಡಿದ್ದರು. ಈಗ ಅವರು ಮುಂಬೈ ಉತ್ತರ ಕೇಂದ್ರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿದ್ದಾರೆ.

ಹೇಮಂತ್ ಕರ್ಕರೆಯನ್ನು ಕೊಂದ ಗುಂಡು ಅಜ್ಮಲ್ ಕಸಬ್‌ನಂತಹ ಭಯೋತ್ಪಾದಕರದ್ದಲ್ಲ, ಆದು ಆರೆಸ್ಸೆಸ್‌ಗೆ ನಿಕಟವಾಗಿರುವ ಪೊಲೀಸ್ ಅಧಿಕಾರಿಯದ್ದು, ಈ ಸತ್ಯವನ್ನು ಮುಚ್ಚಿಟ್ಟ ಉಜ್ವಲ್ ನಿಕಮ್ ಒಬ್ಬ ದೇಶದ್ರೋಹಿ ಮತ್ತು ಅವರಂತಹ ದೇಶದ್ರೋಹಿಗೆ ಬಿಜೆಪಿ ಚುನಾವಣಾ ಟಿಕೆಟ್ ನೀಡಿದೆ ಎಂದು ವಡೆತ್ತಿವಾರ್ ಆರೋಪಿಸಿದ್ದಾರೆ.



ಕೊಲ್ಹಾಪುರದಲ್ಲಿ ಭಾನುವಾರ ಮಾತನಾಡಿದ ವಡೆತ್ತಿವಾರ್, ತಮ್ಮ ಹೇಳಿಕೆಗಳಿಗೆ ರಾಜಕೀಯ ಬಣ್ಣ ನೀಡಲಾಗುತ್ತಿದೆ, ತಮ್ಮ ಹೇಳಿಕೆಗಳು ಮಾಜಿ ಉನ್ನತ ಪೊಲೀಸ್ ಅಧಿಕಾರಿ ಎಸ್.ಎಂ. ಮುಶ್ರೀಫ್ ಬರೆದಿರುವ ಕರ್ಕರೆಯನ್ನು ಕೊಂದ ಪುಸ್ತಕವನ್ನು ಆಧರಿಸಿವೆ ಎಂದು ಸ್ಪಷ್ಟಪಡಿಸಿದ್ದಾರೆ.

ನಾನು ಎಸ್‌ಎಂ ಮುಶ್ರೀಫ್ ಬರೆದಿರುವ ಪುಸ್ತಕದಲ್ಲಿ ಬರೆದದ್ದನ್ನು ಉಲ್ಲೇಖಿಸಿದ್ದೇನೆ. ಹೇಮಂತ್ ಕರ್ಕರೆಗೆ ತಗುಲಿದ ಗುಂಡಿನ ಬಗ್ಗೆ ಅದರಲ್ಲಿ ಪ್ರತಿಯೊಂದು ಮಾಹಿತಿಯೂ ಇತ್ತು. ಇದು ಭಯೋತ್ಪಾದಕರ ಬುಲೆಟ್ ಅಲ್ಲ ಎಂದು ಹೇಳಿದ್ದಾರೆ.

ವಡೆಟ್ಟಿವಾರ್ ಅವರ ಹೇಳಿಕೆಯು ಮಹಾ ರಾಷ್ಟ್ರದಲ್ಲಿ ಆಡಳಿತಾರೂಢ ಬಿಜೆಪಿ ಮತ್ತು ಮುಖ್ಯಮಂತ್ರಿ ಏಕನಾಥ್ ಶಿಂಧೆ ನೇತೃತ್ವದ ಶಿವಸೇನೆಯ ಟೀಕೆಗೆ ಕಾರಣವಾಗಿದೆ. ಮುಂಬೈ ಭಯೋತ್ಪಾದನಾ ದಾಳಿಯಲ್ಲಿ ಹುತಾತ್ಮರಾದ ವೀರಯೋಧರನ್ನು ಕಾಂಗ್ರೆಸ್ ಅವಮಾನಿಸಿದೆ ಎಂದು ಆರೋಪಿಸಿದ ಬಿಜೆಪಿ ರಾಜ್ಯಾಧ್ಯಕ್ಷ ಚಂದ್ರಶೇಖರ ಬಾವನಕುಲೆ, ಇಂತಹ ಹೇಳಿಕೆಗಳ ಮೂಲಕ ಪಾಕಿಸ್ತಾನಕ್ಕೆ ಸಹಾಯ ಮಾಡಲು ಕಾಂಗ್ರೆಸ್ ಪಿತೂರಿ ನಡೆಸುತ್ತಿದೆ ಎಂದು ಹೇಳಿದ್ದಾರೆ.


ಚುನಾವಣೆಯಲ್ಲಿ ಮತ ಪಡೆಯಲು ಕಾಂಗ್ರೆಸ್ ಎಷ್ಟು ಕೆಳಮಟ್ಟಕ್ಕೆ ಇಳಿಯುತ್ತದೆ? ಅವರು ಈಗ ಬಿಜೆಪಿಯನ್ನು ವಿರೋಧಿಸಲು 26/11 ಮುಂಬೈ ದಾಳಿಯ ಭಯೋತ್ಪಾದಕ ಅಜ್ಮಲ್ ಕಸಬ್‌ನ ಪರವಾಗಿ ಮಾತನಾಡುತ್ತಿದ್ದಾರೆಯೇ? ಸ್ವಲ್ಪ ನಾಚಿಕೆ ಇರಲಿ. ಕಾಂಗ್ರೆಸ್‌ಗೆ ಯಾವುದೇ ಸಮಸ್ಯೆ ಇಲ್ಲ. ಅವರು ಈಗ ಹುತಾತ್ಮರಾದ ನಮ್ಮ ಪೊಲೀಸ್ ಅಧಿಕಾರಿಗಳನ್ನು ಅವಮಾನಿಸುತ್ತಿದ್ದಾರೆ ಎಂದು ಚಂದ್ರಶೇಖರ ಬಾವನಕುಲೆ ಹೇಳಿದ್ದಾರೆ.

## ಅಮೇಥಿ ಕಾಂಗ್ರೆಸ್ ಕಚೇರಿ ಮೇಲೆ ದಾಳಿ, ಕಾರ್ಯಕರ್ತನಿಗೆ ಹಲ್ಲೆ: ಬಿಜೆಪಿ ಮುಖಂಡರು ಸೇರಿ 10 ಮಂದಿ ವಿರುದ್ಧ ಪ್ರಕರಣ ದಾಖಲು

■ವಿಜಯಸಾಕ್ಷಿ ಸುದ್ದಿ, ಅಮೇಥಿ

ಉತ್ತರ ಪ್ರದೇಶದ ಅಮೇಥಿಯಲ್ಲಿ ಕಾಂಗ್ರೆಸ್ ಪಕ್ಷದ ಕಚೇರಿ ಮೇಲೆ ಭಾನುವಾರ (ಮೇ 5) ಮಧ್ಯರಾತ್ರಿ ಅಪರಿಚಿತ ದುಷ್ಕರ್ಮಿಗಳ ಗುಂಪೊಂದು ದಾಳಿ ಮಾಡಿದೆ. ಪಕ್ಷದ ಕಚೇರಿಯ ಹೊರಗೆ ನಿಲ್ಲಿಸಿದ್ದ ಹಲವು ವಾಹನಗಳನ್ನು ಧ್ವಂಸಗೊಳಿಸಿದ ದುಷ್ಕರ್ಮಿಗಳು, ಗಲಾಟೆ ಸೃಷ್ಟಿಸಿ ಪರಾರಿಯಾಗಿದ್ದಾರೆ. ಈ ಘಟನೆಯಲ್ಲಿ ಜಿಲ್ಲಾ ಯುವ ಕಾಂಗ್ರೆಸ್ ಮುಖಂಡ ಶುಭಂ ಸಿಂಗ್ ಅವರ ಮೇಲೂ ಅಪರಿಚಿತರು ಹಲ್ಲೆ ನಡೆಸಿದ್ದಾರೆ.

ಘಟನೆಯ ಕುರಿತು ಪ್ರತಿಕ್ರಿಯಿಸಿರುವ ಕಾಂಗ್ರೆಸ್ "ಉತ್ತರ ಪ್ರದೇಶದ ಅಮೇಥಿಯಲ್ಲಿ ಸ್ಮೃತಿ ಇರಾನಿ ಮತ್ತು ಬಿಜೆಪಿ ಕಾರ್ಯಕರ್ತರು ತೀವ್ರ ಭಯಭೀತ ರಾಗಿದ್ದಾರೆ. ಕಣ್ಣಮುಂದೆ ಕಾಣುತ್ತಿರುವ ಸೋಲಿ ನಿಂದ ಹತಾಶರಾಗಿರುವ ಬಿಜೆಪಿ ಗೂಂಡಾಗಳು ಕಟ್ಟಿಗೆ ಹಿಡಿದುಕೊಂಡು ಅಮೇಥಿಯ ಕಾಂಗ್ರೆಸ್ ಕಚೇರಿಯ ಹೊರಗೆ ನಿಲ್ಲಿಸಿದ್ದ ವಾಹನಗಳನ್ನು ಧ್ವಂಸಗೊಳಿಸಿದ್ದಾರೆ. ಕಾಂಗ್ರೆಸ್ ಕಾರ್ಯಕರ್ತರು ಮತ್ತು ಅಮೇಥಿಯ ಜನರ ಮೇಲೆ ಮಾರಣಾಂತಿಕ ಹಲ್ಲೆ ಕೂಡ



ನಡೆದಿದೆ. ಈ ದಾಳಿಯಲ್ಲಿ ಹಲವರು ತೀವ್ರವಾಗಿ ಗಾಯಗೊಂಡಿದ್ದಾರೆ.

ಘಟನೆಯಲ್ಲಿ ಸ್ಥಳೀಯರ ವಾಹನಗಳಿಗೂ ಹಾನಿಯಾಗಿದೆ. ಈ ಇಡೀ ಘಟನೆಯಲ್ಲಿ ಪೊಲೀಸ್ ಆಡಳಿತ ಮೂಕ ಪ್ರೇಕ್ಷಕರಂತೆ ನಿಂತಿತ್ತು. ಅಮೇಥಿಯಲ್ಲಿ ಬಿಜೆಪಿ ಹೀನಾಯವಾಗಿ ಸೋಲಲಿದೆ ಎಂಬುವುದಕ್ಕೆ ಈ ಘಟನೆಯೇ ಸಾಕ್ಷಿ" ಎಂದು ಎಕ್ಸ್‌ನಲ್ಲಿ ಬರೆದುಕೊಂಡಿದೆ.

ಘಟನೆಯ ಕುರಿತು ಪ್ರತಿಕ್ರಿಯಿಸಿರುವ ಕಾಂಗ್ರೆಸ್ "ಉತ್ತರ ಪ್ರದೇಶದ ಅಮೇಥಿಯಲ್ಲಿ ಸ್ಮೃತಿ ಇರಾನಿ ಮತ್ತು ಬಿಜೆಪಿ ಕಾರ್ಯಕರ್ತರು ತೀವ್ರ ಭಯಭೀತರಾಗಿದ್ದಾರೆ. ಕಣ್ಣ ಮುಂದೆ ಕಾಣುತ್ತಿರುವ ಸೋಲಿನಿಂದ ಹತಾಶರಾಗಿರುವ ಬಿಜೆಪಿ ಗೂಂಡಾಗಳು ಕಟ್ಟಿಗೆ ಹಿಡಿದುಕೊಂಡು ಅಮೇಥಿಯ ಕಾಂಗ್ರೆಸ್ ಕಚೇರಿಯ ಹೊರಗೆ ನಿಲ್ಲಿಸಿದ್ದ ವಾಹನಗಳನ್ನು ಧ್ವಂಸಗೊಳಿಸಿದ್ದಾರೆ. ಕಾಂಗ್ರೆಸ್ ಕಾರ್ಯಕರ್ತರು ಮತ್ತು ಅಮೇಥಿಯ ಜನರ ಮೇಲೆ ಮಾರಣಾಂತಿಕ ಹಲ್ಲೆ ಕೂಡ ನಡೆದಿದೆ. ಈ ದಾಳಿಯಲ್ಲಿ ಹಲವರು ತೀವ್ರವಾಗಿ ಗಾಯಗೊಂಡಿದ್ದಾರೆ.

ಘಟನೆಯಲ್ಲಿ ಸ್ಥಳೀಯರ ವಾಹನಗಳಿಗೂ ಹಾನಿಯಾಗಿದೆ. ಈ ಇಡೀ ಘಟನೆಯಲ್ಲಿ ಪೊಲೀಸ್ ಆಡಳಿತ ಮೂಕ ಪ್ರೇಕ್ಷಕರಂತೆ ನಿಂತಿತ್ತು. ಅಮೇಥಿಯಲ್ಲಿ ಬಿಜೆಪಿ ಹೀನಾಯವಾಗಿ ಸೋಲಲಿದೆ ಎಂಬುವುದಕ್ಕೆ ಈ ಘಟನೆಯೇ ಸಾಕ್ಷಿ" ಎಂದು ಎಕ್ಸ್‌ನಲ್ಲಿ ಬರೆದುಕೊಂಡಿದೆ.

ಈ ಆರೋಪಗಳು ಆಧಾರ ರಹಿತ ಮತ್ತು ರಾಜಕೀಯ ಪ್ರೇರಿತ ಎಂದು ಬಿಜೆಪಿ ಜಿಲ್ಲಾ ಘಟಕದ ಮುಖ್ಯಸ್ಥ ದುರ್ಗೇಶ್ ತ್ರಿಪಾಠಿ ಹೇಳಿದ್ದಾರೆ. ಕಾಂಗ್ರೆಸ್ ನಾಯಕರು ಹತಾಶರಾಗಿದ್ದಾರೆ ಮತ್ತು ನಿರಾಶೆಗೊಂಡಿದ್ದಾರೆ. ಕ್ಷುಲ್ಲಕ ರಾಜಕೀಯ ಹೊರತುಪಡಿಸಿ ಅವರಿಗೆ ಏನೂ ಉಳಿದಿಲ್ಲ ಎಂದಿದ್ದಾರೆ.

### ಕರ್ನಾಟಕದ ಸಾಂಸ್ಕೃತಿಕ ನಾಯಕ 'ವಿಶ್ವಗುರು ಬಸವಣ್ಣ' ಉಪನ್ಯಾಸ ಕಾರ್ಯಕ್ರಮ

# ಬಹುತ್ವದ ಭಾರತಕ್ಕೆ ಬಸವಣ್ಣನೇ ಬೆಳಕು

■ ವಿಜಯಸಾಕ್ಷಿ ಸುದ್ದಿ, ಗದಗ

12ನೇ ಶತಮಾನದಲ್ಲಿ ಸಮಾಜೋಧಾರ್ಮಿಕ ಚಳವಳಿಯ ನೇತೃತ್ವ ವಹಿಸಿ, ಸಮಾಜದ ಓರೆಕೋರೆಗಳನ್ನು ತಿದ್ದಿ, ಸಮಸಮಾಜದ ನಿರ್ಮಾಣಕ್ಕೆ ಎಲ್ಲರ ಜೊತೆಗೂಡಿ ಹೆಜ್ಜೆ ಹಾಕಿದ ವ್ಯಕ್ತಿ ಬಸವಣ್ಣ. ಇಷ್ಟಲಿಂಗದ ಮೂಲಕ ದೇಹವನ್ನೇ ದೇವಾಲಯವಾಗಿಸಿ ಆಧ್ಯಾತ್ಮಿಕ ಸಮಾನತೆಯನ್ನು, ಕಾಯಕಕ್ಕೆ ದೈವಿಕತೆಯನ್ನು, ದಾಸೋಹಕ್ಕೆ ಶ್ರೇಷ್ಠತೆಯನ್ನು ತಂದುಕೊಟ್ಟು ದಯೆಯೇ ಧರ್ಮವೆಂದು ಸಾರಿ ಜಗತ್ತಿನ ಜನರಿಗೆ ನಡೆ-ನುಡಿ, ಸಿದ್ಧಾಂತವನ್ನು ಪ್ರತಿಪಾದಿಸಿದವರು ವಿಶ್ವಗುರು ಬಸವಣ್ಣನವರು. ಬಹುತ್ವದ ಭಾರತಕ್ಕೆ ಬಸವಣ್ಣನೇ ಬೆಳಕು ಎಂದು ಚಿಂತಕ ಅಶೋಕ ಬರಗುಂಡಿ ಅಭಿಪ್ರಾಯಪಟ್ಟರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನಿಂದ ಬಸವ ಜಯಂತಿ ಅಂಗವಾಗಿ ಹಮ್ಮಿಕೊಂಡಿದ್ದ 'ಕರ್ನಾಟಕದ ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣ' ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದರು.

ಡಾ. ಅಂಬೇಡ್ಕರರು ರಚಿಸಿದ ಸಂವಿಧಾನದಲ್ಲಿ ಮತ್ತು ವಿಶ್ವಸಂಸ್ಥೆ ಪ್ರತಿಪಾದಿಸಿದ ಮಾನವ ಹಕ್ಕುಗಳಲ್ಲಿ ಬಸವಾದಿ ಶರಣರು ಪ್ರತಿಪಾದಿಸಿದ ಮೌಲ್ಯಗಳ ತಿರುಳನ್ನು ಕಾಣುತ್ತೇವೆ. ಎಲ್ಲರಲ್ಲಿರುವ ಮೂಲ ವಸ್ತು ಒಂದೇ ಆಗಿರುವದರಿಂದ ಭೇದಭಾವ ಸಲ್ಲದು. ಬಹುತ್ವದ ಭಾರತಕ್ಕೆ ಬಸವಣ್ಣನವರ ವಿಚಾರಗಳೇ ಪ್ರಧಾನವಾಗಿವೆ. ಬಸವಣ್ಣ ಈ ಕಾಲದ ಅನಿವಾರ್ಯ ಹಾಗೂ ಮಾದರಿ ವ್ಯಕ್ತಿ. ಈ ಹಿನ್ನೆಲೆಯಲ್ಲಿ ಕರ್ನಾಟಕ ಸಾಂಸ್ಕೃತಿಕ ನಾಯಕನಾಗಿ ನಮ್ಮ ಮನೆ-ಮನ ಬೆಳಗುವ ವ್ಯಕ್ತಿಯಾಗಿದ್ದಾನೆ ಎಂದು ತಿಳಿಸಿದರು.



ಬಸವಣ್ಣನವರ ಜೀವನ ಚರಿತ್ರೆಯ ಕುರಿತಾದ ಛಾಯಾಚಿತ್ರಗಳನ್ನು ಹೆಸರಾಂತ ಚಿತ್ರ ಕಲಾವಿದ, ಸಾಹಿತಿ ಪುಂಡಲೀಕ ಕಲ್ಲಿಗನೂರ ಪ್ರದರ್ಶಿಸಿ, ವಿವರಿಸಿದರು.

ಈ ಸಂದರ್ಭದಲ್ಲಿ ನೀಲಗಂಗಾ ಪ್ರಕಾಶನದಿಂದ ಪ್ರಕಟಿಸಿದ ಟಿ.ಆರ್. ಚಂದ್ರಶೇಖರ ರಚಿಸಿದ 'ಬಸವಪ್ರಣೀತ ಲಿಂಗಾಯತಧರ್ಮ' ಪುಸ್ತಕವನ್ನು ಜಿಲ್ಲಾ ಖಜಾನೆ ಅಧಿಕಾರಿಗಳು ಹಾಗೂ ಸಾಹಿತಿ ವಿ. ಹರಿನಾಥಬಾಬು ಲೋಕಾರ್ಪಣೆಗೊಳಿಸಿದರು.

ವೇದಿಕೆಯ ಮೇಲೆ ಪ್ರಗತಿಪರ ಚಿಂತಕ ಶೇಕಣ್ಣ ಕವಳಿಕಾಯಿ ಉಪಸ್ಥಿತರಿದ್ದರು. ಶ್ರೀಕಾಂತ ಬಡ್ಡೂರ ಸ್ವಾಗತಿಸಿದರು. ಶಿವಾನಂದ ಗಿಡ್ನಂದಿ ಕಾರ್ಯಕ್ರಮ ನಿರೂಪಿಸಿದರು. ಪ್ರೊ. ಸಿದ್ದಲಿಂಗೇಶ ಸಜ್ಜನಶೆಟ್ಟರ ವಂದಿಸಿದರು.

ಕಾರ್ಯಕ್ರಮದಲ್ಲಿ ಡಾ. ಜಿ.ಬಿ. ಪಾಟೀಲ, ಪ್ರೊ. ಅನ್ನದಾನಿ ಹಿರೇಮಠ, ಡಾ. ಶಂಕರ ಬಾರಿಕೇರ, ಪ್ರೊ. ಚಂದ್ರಶೇಖರ ವಸ್ತ್ರದ, ಸುರೇಶ ಕುಂಬಾರ, ರಾಜಶೇಖರ ಕರಡಿ, ಡಾ. ನಾಗರಾಜ ಬಳಿಗೇರ, ಡಾ. ಬಿ.ಎಲ್. ಚವ್ಹಾಣ, ಮರಳಸಿದ್ದಪ್ಪ ದೊಡ್ಡಮನಿ, ಅಶೋಕ ಸುತಾರ, ಪ್ರೊ. ಆಯ್.ಎಸ್. ಹಿರೇಮಠ, ನಾಗಭೂಷಣ ಬಡಿಗಣ್ಣವರ, ಗೌರಕ್ಕ ಬಡಿಗಣ್ಣವರ, ಶಿವನಗೌಡ ಗೌಡರ, ಬಸವರಾಜ ಕೂಗು, ಎಂ.ಪಿ. ಪಾಟೀಲ, ಎಂ.ಎಸ್. ಗೌಡಪ್ಪಗೌಡರ, ಬಿ.ಆರ್. ಹೊಸಮನಿ, ಡಿ.ಎನ್. ವಜ್ರೇಶ್ವರಿ, ಪಿ.ಎಸ್. ಹಿರೇಮಠ, ವಿ.ಆರ್. ಮುಂಬರಡ್ಡಿ, ಬಿ.ವಿ. ಅಂಗಡಿ, ರಮೇಶ ಪೂಜಾರ, ಎಸ್. ಆರ್. ಚನ್ನಪ್ಪಗೌಡರ, ವಿ.ಎಸ್.ದಲಾಲಿ, ಅಜಿತ ಘೋರ್ಪಡೆ, ಶಶಿಕಾಂತ ಕೊರ್ಲಹಳ್ಳಿ, ಆರ್.ಡಿ. ಕಪ್ಪಲಿ, ಪ್ರೊ. ಶಕುಂತಲಾ ಸಿಂಧೂರ, ಎಸ್. ಎಂ. ಕಾತರಕಿ, ಸುಧಾ ಬಳ್ಳಿ, ರತ್ನಾ ಪುರಂತರ, ಶೈಲಜಾ ಗಿಡ್ನಂದಿ, ಉಮಾದೇವಿ ಕಣವಿ, ಜಯಶ್ರೀ ಅಂಗಡಿ, ರೇಣುಕಾ ಹಾಸಲಕರ, ಮಂಜುಳಾ ಹಾಸಲಕರ, ಎಂ.ಸಿ. ದೊಡ್ಡಮನಿ, ಎಸ್.ಸಿ. ಹಾಲಕೇರಿ, ಎಂ. ಎಫ್.ಡೋಣಿ, ಶಿವಪುತ್ರವ್ವ ಕಣವಿ, ಎಂ.ಸಿ. ಹುಚ್ಚಮ್ಮನವರ, ರಮೇಶ ತೋಟದ, ಆರ್.ಬಿ. ಪಾಟೀಲ, ಶಿವಾನಂದ ಭಜಂತ್ರಿ, ಅಪ್ಪಣ್ಣ ಕಲ್ಲಿಗನೂರ, ಶಂಕರ ಕಲ್ಲಿಗನೂರ ಹಾಜರಿದ್ದರು.

> ಅಧ್ಯಕ್ಷತೆ ವಹಿಸಿ ಕಸಾಪ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಭಾರತ ಆಧ್ಯಾತ್ಮಿಕತೆಯ ನೆಲೆವೀಡು. 12ನೇ ಶತಮಾನದಲ್ಲಿ ಆಧ್ಯಾತ್ಮಕ್ಕೂ ಕೂಡಾ ಹೊಸ ಭಾಷ್ಯ ಬರೆದವರು ಶರಣರಾಗಿದ್ದಾರೆ. ಲೌಕಿಕ ಮತ್ತು ಪಾರಮಾರ್ಥಿಕ ಬದುಕನ್ನು ಸುಂದರಗೊಳಿಸುವ ಸಿದ್ಧಾಂತಗಳನ್ನು ಮಂಡಿಸಿದ್ದಾರೆ. ಅನೇಕ ಹೊಸ ಹೊಳಹುಗಳಿಗೆ ಬಸವಾದಿ ಶರಣರ ಕಾಲ ಕಾರಣವಾಗಿದೆ ಎಂದು ನುಡಿದರು.

## ಪಶ್ಚಿಮ ಬಂಗಾಳದ ಹೂಗ್ಲಿಯಲ್ಲಿ ಬಾಂಬ್ ಸ್ಫೋಟ: ಬಾಲಕ ಮೃತ್ಯು, ಇಬ್ಬರಿಗೆ ಗಂಭೀರ ಗಾಯ



■ ವಿಜಯಸಾಕ್ಷಿ ಸುದ್ದಿ, ಪಶ್ಚಿಮ ಬಂಗಾಳ

ಪಶ್ಚಿಮ ಬಂಗಾಳದ ಹೂಗ್ಲಿ ಜಿಲ್ಲೆಯಲ್ಲಿ ಕಚ್ಚಾ ಬಾಂಬ್ ಸ್ಫೋಟ ಸಂಭವಿಸಿ ಏಳು ವರ್ಷದ ಬಾಲಕ ಸಾವನ್ನಪ್ಪಿದ್ದು, ಇತರ ಇಬ್ಬರು ಅಪ್ರಾಪ್ತ ಬಾಲಕರಿಗೂ ತೀವ್ರ ಗಾಯಗಳಾಗಿದೆ.

ಮೃತ ಬಾಲಕನನ್ನು ರಾಜ್ ಬಿಸ್ವಾಸ್ ಎಂದು ಗುರುತಿಸಲಾಗಿದೆ. ಘಟನೆಯಲ್ಲಿ ರೂಪಮ್ ಬಲ್ಲವ್ (13) ಮತ್ತು ಸೌರವ್ ಚೌಧರಿ (8) ಗಾಯಗೊಂಡಿದ್ದಾರೆ.

ಪಾಂಡುವಾ ನೇತಾಜಿಪಲ್ಲಿ ಕಾಲೋನಿಯ ಕೊಳದ ಪಕ್ಕದಲ್ಲಿ ಮಕ್ಕಳ ಗುಂಪು ಆಟವಾಡುತ್ತಿದ್ದಾಗ ಗುಂಡಿಯೊಳಗೆ ಇದ್ದ ಸ್ಫೋಟಕ ಬ್ಲಾಸ್ಟ್ ಆಗಿದೆ. ಏಕಾಏಕಿ ಆ ಪ್ರದೇಶದಲ್ಲಿ ಭಾರೀ ಶಬ್ದ ಕೇಳಿ ಬಂದಿರುವ ಹಿನ್ನೆಲೆ ಸ್ಥಳಕ್ಕೆ ಜನರು ತೆರಳಿ ಪರಿಶೀಲಿಸಿದ್ದಾರೆ, ಈ ವೇಳೆ ಸ್ಥಳದಲ್ಲಿ ಕೆಲವು ಮಕ್ಕಳು ಪ್ರಜ್ಞೆ ತಪ್ಪಿ ಬಿದ್ದಿರುವುದು ಕಂಡು ಬಂದಿದೆ. ಮೂವರು ಬಾಲಕರನ್ನು ಮೊದಲು ಪಾಂಡುವಾ ಆಸ್ಪತ್ರೆಗೆ ಸಾಗಿಸಲಾಗಿದೆ. ಅಲ್ಲಿ ಬಿಸ್ವಾಸ್ ಮೃತಪಟ್ಟಿದ್ದಾರೆ ಎಂದು ಘೋಷಿಸಲಾಗಿದೆ. ಇನ್ನಿಬ್ಬರು ಬಾಲಕರ ಸ್ಥಿತಿ ಗಂಭೀರವಾಗಿರುವ ಕಾರಣ ಅವರನ್ನು ಹೆಚ್ಚಿನ ಚಿಕಿತ್ಸೆಗೆ ಚುಂಚೂರ ಇಮಾಂಬರ ಆಸ್ಪತ್ರೆಗೆ ದಾಖಲಿಸಲಾಗಿದೆ.

ತೃಣಮೂಲ ಕಾಂಗ್ರೆಸ್ ಸಂಸದ ಅಭಿಷೇಕ್ ಬ್ಯಾನರ್ಜಿ ಅವರು ಇಂದು ಪಾಂಡುವಾದಲ್ಲಿ ಹೂಗ್ಲಿ ಲೋಕಸಭಾ ಕ್ಷೇತ್ರದ ಪಕ್ಷದ ಅಭ್ಯರ್ಥಿ ರಚನಾ ಬ್ಯಾನರ್ಜಿ ಅವರನ್ನು ಬೆಂಬಲಿಸಿ ಚುನಾವಣಾ ರ್ಯಾಲಿಯನ್ನು ನಡೆಸಲಿದ್ದಾರೆ. ಈ ಮಧ್ಯೆ ಘಟನೆ ನಡೆದಿದೆ. ಈ ಕುರಿತು ಹೂಗ್ಲಿ ಗ್ರಾಮಾಂತರ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ಬಿಜೆಪಿ ನಾಯಕ ಮತ್ತು ಹೂಗ್ಲಿಯ ಹಾಲಿ ಸಂಸದ ಲಾಕೆಟ್ ಚಟರ್ಜಿ ಅವರು ಪಾಂಡುವಾದಲ್ಲಿ ಸಂತ್ರಸ್ತ ಕುಟುಂಬವನ್ನು ಭೇಟಿ ಮಾಡಿದ್ದು, ಸ್ಫೋಟದಲ್ಲಿ ತೃಣಮೂಲ ಕಾಂಗ್ರೆಸ್ ಭಾಗಿಯಾಗಿದೆ ಎಂದು ಆರೋಪಿಸಿದೆ. ಲೋಕಸಭೆ ಚುನಾವಣೆ ಹೊಸ್ತಿಲಲ್ಲಿ ಈ ಕಚ್ಚಾ ಬಾಂಬ್ ಸ್ಫೋಟ ಪ್ರಕರಣವು ಪ.ಬಂಗಾಳದಲ್ಲಿ ಆಡಳಿತರೂಡ ಟಿಎಂಸಿ ಮತ್ತು ವಿಪಕ್ಷ ಬಿಜೆಪಿ ನಡುವೆ ಅರೋಪ-ಪ್ರತ್ಯಾರೋಪಕ್ಕೆ ಸಾಕ್ಷಿಯಾಗುತ್ತಿದೆ.

ಪಶ್ಚಿಮ ಬಂಗಾಳದಲ್ಲಿ ಮಂಗಳವಾರ ಲೋಕಸಭೆ ಚುನಾವಣೆಯ ಮೂರನೇ ಹಂತದ ಮತದಾನ ನಡೆಯಲಿದೆ. ಇದರಿಂದ ಮತಗಟ್ಟೆಗಳ ಸುತ್ತ ಬಿಗಿ ಭದ್ರತೆಯ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ.

### ಗಾಝಾದಲ್ಲಿ ಇಸ್ರೇಲ್ ನಡೆಸಿದ ಹತ್ಯಾಕಾಂಡವನ್ನು ಜಗತ್ತಿನ ಮುಂದೆ ಬಿಚ್ಚಿಟ್ಟ ಪ್ಯಾಲೆಸ್ತೀನ್ ಪತ್ರಕರ್ತರಿಗೆ

## '2024ರ ಯುನೆಸ್ಕೋ ಪತ್ರಿಕಾ ಸ್ವಾತಂತ್ರ್ಯ ಪ್ರಶಸ್ತಿ'

■ ವಿಜಯಸಾಕ್ಷಿ ಸುದ್ದಿ, ಗಾಝಾ




ಗಾಝಾದಲ್ಲಿ ಇಸ್ರೇಲ್ ನಡೆಸಿದ ಹತ್ಯಾಕಾಂಡದ ಬಗ್ಗೆ ವರದಿ ಮಾಡಿದ ಪ್ಯಾಲೆಸ್ತೀನ್ ಪತ್ರಕರ್ತರನ್ನು 2024ರ ಯುನೆಸ್ಕೋ/ಗಿಲ್ಲೆರ್ಮೊ ಕ್ಯಾನೊ ವರ್ಲ್ಡ್ ಪ್ರೆಸ್ ಫ್ರೀಡಂ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ಅಂತರಾಷ್ಟ್ರೀಯ ಮಾಧ್ಯಮ ವೃತ್ತಿಪರ ತೀರ್ಪುಗಾರರ ಶಿಫಾರಸಿನ ಮೇರೆಗೆ ವಿಜೇತರನ್ನು ಆಯ್ಕೆ ಮಾಡಲಾಗಿದೆ. ವಿದೇಶಿ ಮಾಧ್ಯಮಗಳಿಗೆ ಗಾಝಾಗೆ ತೆರಳದಂತೆ ಇಸ್ರೇಲ್ ನಿರ್ಬಂಧ ವಿಧಿಸಿತ್ತು. ಸ್ಥಳೀಯ ಪತ್ರಕರ್ತರು ಗಾಝಾ ಪಟ್ಟಿಯ ಕಣ್ಣುಗಳು ಮತ್ತು ಕಿವಿಗಳಾಗಿದ್ದರು. ಇಸ್ರೇಲ್ ದಾಳಿ ಮೂಲಕ ಗಾಝಾದಲ್ಲಿ 30,000ಕ್ಕೂ ಅಧಿಕ ಅಮಾಯಕ ನಾಗರಿಕರನ್ನು ಹತ್ಯೆ ಮಾಡಿದೆ. ಈ ವೇಳೆ ಪತ್ರಕರ್ತರ ಸರಣಿ ಸಾವುಗಳು ನಡೆದಿದೆ. ಆದರೂ ಎದೆಗುಂದದೆ ಪ್ಯಾಲೆಸ್ತೀನ್ ಪತ್ರಕರ್ತರು ಇಸ್ರೇಲ್‌ನ ಕೃತ್ಯವನ್ನು ಜಗತ್ತಿನ ಮುಂದೆ ಬಿಚ್ಚಿಟ್ಟಿದ್ದರು.

UNESCO ಗಾಝಾದಲ್ಲಿ 26 ಪತ್ರಕರ್ತರ ಸಾವುಗಳ ಬಗ್ಗೆ ಉಲ್ಲೇಖಿಸಿದೆ, ಆದರೆ ವಾಸ್ತವ ಸಂಖ್ಯೆ ಅದಕ್ಕಿಂತ ಹೆಚ್ಚಿರಬಹುದು. ಅಲ್ ಜಝೀರಾ ಮಾಧ್ಯಮದ ಪ್ರಕಾರ ಗಾಝಾದಲ್ಲಿ 100ಕ್ಕಿಂತ ಹೆಚ್ಚು ಪತ್ರಕರ್ತರು ಮೃತಪಟ್ಟಿದ್ದಾರೆ. ಅಲ್ ಜಝೀರಾದ ಗಾಝಾ ಬ್ಯೂರೋ ಮುಖ್ಯಸ್ಥ ವೇಲ್ ದಹದೌಹ್ ತನ್ನ ಕುಟುಂಬದ ಅನೇಕ ಸದಸ್ಯರನ್ನು ಕಳೆದುಕೊಂಡಿದ್ದಾರೆ. ಅವರು ಕೂಡ ಇಸ್ರೇಲ್ ದಾಳಿ ವೇಳೆ ಗಾಯಗೊಂಡಿದ್ದಾರೆ.


ಅಲ್ ಜಝೀರಾ ಚಾನೆಲ್‌ನ ಕ್ಯಾಮರಾಮ್ಯಾನ್ ಸಮೀರ್ ಅಬುದಾಕ ದಕ್ಷಿಣ ಗಾಝಾದಲ್ಲಿ ವರದಿ ಮಾಡುವಾಗ ಮೃತಪಟ್ಟಿದ್ದಾರೆ. ಇದಲ್ಲದೆ ಇಸ್ರೇಲ್ ದೇಶವು ಅಲ್‌ಜಝೀರಾ ಮಾಧ್ಯಮದ ಪ್ರಸಾರ ಮತ್ತು ಕಾರ್ಯಚರಣೆಯನ್ನು ಸಂಪೂರ್ಣವಾಗಿ ನಿಷೇಧಿಸಿದೆ.

ಪ್ರಶಸ್ತಿ ಕುರಿತು ತೀರ್ಪುಗಾರರ ಸಮಿತಿಯ ಮುಖ್ಯಸ್ಥರಾದ ಮಾರಿಸಿಯೊ ವೀಬೆಲ್ ಪತ್ರಿಕಾ ಪ್ರಕಟಣೆಯನ್ನು ಹೊರಡಿಸಿದ್ದು, ಹತಾಶತೆಯ ಈ ಸಮಯದಲ್ಲಿ, ಈ ಬಿಕ್ಕಟ್ಟಿನ ಬಗ್ಗೆ ವರದಿ ಮಾಡುತ್ತಿರುವ ಪ್ಯಾಲೆಸ್ತೀನ್ ಪತ್ರಕರ್ತರಿಗೆ ಒಗ್ಗಟ್ಟಿನ ಬಗ್ಗೆ ಬಲವಾದ ಸಂದೇಶವನ್ನು ಕಳುಹಿಸಲು ನಾವು ಬಯಸುತ್ತೇವೆ. ಮಾನವೀಯವಾಗಿ ಅವರ ಧೈರ್ಯ ಮತ್ತು ಅಭಿವ್ಯಕ್ತಿ ಸ್ವಾತಂತ್ರ್ಯದ ಬದ್ಧತೆಗೆ ನಾವು ದೊಡ್ಡ ಋಣವನ್ನು ಹೊಂದಿದ್ದೇವೆ ಎಂದು ಹೇಳಿದ್ದಾರೆ.

UNESCO/Guillermo Cano ಪ್ರಶಸ್ತಿಯನ್ನು ಪ್ರತಿ ವರ್ಷ ನೀಡಲಾಗುತ್ತದೆ, ಕಠಿಣ ಮತ್ತು ಅಪಾಯಕಾರಿ ಸಂದರ್ಭಗಳನ್ನು ಎದುರಿಸುತ್ತಿರುವ ಪತ್ರಕರ್ತರ ಧೈರ್ಯವನ್ನು ಮೆಚ್ಚಿ ಈ ಗೌರವವನ್ನು ನೀಡಲಾಗುತ್ತದೆ ಎಂದು UNESCO ನಿರ್ದೇಶಕ-ಜನರಲ್ ಆಡ್ರೆ ಅಜೌಲೆ ಹೇಳಿದ್ದಾರೆ. ವಿಶ್ವಸಂಸ್ಥೆಯ ಶೈಕ್ಷಣಿಕ, ವೈಜ್ಞಾನಿಕ ಮತ್ತು ಸಾಂಸ್ಕೃತಿಕ ಸಂಸ್ಥೆಯು 194 ಸದಸ್ಯ ರಾಷ್ಟ್ರಗಳನ್ನು ಹೊಂದಿದೆ.

ಹಮಾಸ್ ಇಸ್ರೇಲ್ ಮೇಲೆ ಅ.7ರಂದು ನಡೆಸಿದ ವೈಮಾನಿಕ ದಾಳಿಗೆ 1,200 ಜನರು ಮೃತಪಟ್ಟಿದ್ದರು. ಆ ಬಳಿಕ ಇಸ್ರೇಲ್ ಯುದ್ಧ ಘೋಷಿಸಿ ಗಾಝಾ ಮೇಲೆ ನಡೆಸಿದ ದಾಳಿಯಲ್ಲಿ 30,000ಕ್ಕೂ ಅಧಿಕ ಗಾಝಾದ ನಾಗರಿಕರು ಮೃತಪಟ್ಟಿದ್ದಾರೆ. ಮೃತರಲ್ಲಿ ಮಕ್ಕಳು ಮತ್ತು ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ.

## ನಿಧನ ವಾರ್ತೆ



**ತಾರಾಮತಿ ಜ್ಞಾನದೇವ ಚೌದರಿ**

ಗದಗ: ನಗರದ ವೀರನಾರಾಯಣ ರಸ್ತೆಯ ಕೊನೇರಿ ಹೊಂಡದ ಹತ್ತಿರದ ನಿವಾಸಿ ತಾರಾಮತಿ ಜ್ಞಾನದೇವ ಚೌದರಿ (83) ಸೋಮವಾರ ಸಂಜೆ ನಿಧನರಾದರು. ಮೃತರು ಪುತ್ರ, ಪುತ್ರಿ ಸೇರಿದಂತೆ ಅಪಾರ ಬಳಗವನ್ನು ಅಗಲಿದ್ದಾರೆ. ಮೃತರ ಅಂತಿಮಯಾತ್ರೆಯು ಮಂಗಳವಾರ ಬೆಳಿಗ್ಗೆ 11 ಗಂಟೆಗೆ ಸ್ವಗೃಹದಿಂದ ಹೊರಡಲಿದೆ.

# ಶಿಬಿರದ ಮಕ್ಕಳಿಂದ ಮತದಾನ ಜಾಗೃತಿ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಿದ್ಯಾದಾನ ಸಮಿತಿಯ ಕ್ಲಾಸಿಕ್ ಆಂಗ್ಲ ಮಾಧ್ಯಮ ಶಾಲೆಯ ಬೇಸಿಗೆ ಶಿಬಿರದ ಮಕ್ಕಳಿಂದ ಮತದಾನ ಜಾಗೃತಿ ಕಾರ್ಯಕ್ರಮ ನಡೆಯಿತು.

ಶಾಲೆಯ ಶೈಕ್ಷಣಿಕ ಮಾರ್ಗದರ್ಶಕ ಪ್ರತೀಕ ಎಸ್. ಹುಯಿಲಗೋಳ ಮಾತನಾಡಿ, ಮೇ 7ರಂದು ನಡೆಯುವ ಸಾರ್ವತ್ರಿಕ ಲೋಕಸಭಾ ಚುನಾವಣೆಯಲ್ಲಿ ಮತ ಚಲಾಯಿಸುವ ಅರ್ಹತೆ ಹೊಂದಿರುವ ಪ್ರತಿಯೊಬ್ಬ ಮತದಾರರೂ ಕಡ್ಡಾಯವಾಗಿ ಮತದಾನ ಮಾಡಬೇಕು. ಮತದಾನ ಸಂವಿಧಾನ ನಮಗೆ ನೀಡಿರುವ ಹಕ್ಕಾಗಿದೆ. ಅದನ್ನು ಉತ್ತಮ ಪ್ರತಿನಿಧಿಗಳ ಆಯ್ಕೆಗೆ ಬಳಸಬೇಕು. ಚುನಾವಣೆಯಲ್ಲಿ ಮತದಾನ ಮಾಡುವುದನ್ನು ಯಾರೂ ಮರೆಯಬಾರದು ಎಂದು ಕರೆ ನೀಡಿದರು.




ಶಾಲೆಯ ಮುಖ್ಯೋಪಾಧ್ಯಾಯ ಎಂ.ಆರ್. ಡೊಳ್ಳಿನ ಮಾತನಾಡಿ, ಭಾರತದ ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ಮತದಾರರೇ ಪ್ರಭುಗಳು. ಚುನಾವಣೆ ಸಂದರ್ಭದಲ್ಲಿ ಉತ್ತಮ ಜನ ಪ್ರತಿನಿಧಿಗಳನ್ನು ಆಯ್ಕೆ ಮಾಡುವ ಶಕ್ತಿ ಮತದಾರರಲ್ಲಿದೆ ಎಂದರು.

ಶಿಕ್ಷಕಿ ಗಾಯತ್ರಿ ಅಸುಂಡಿ, ನನ್ನ ಮತ ನನ್ನ ಹಕ್ಕು, ನನ್ನ ಮತ ದೇಶಕ್ಕೆ ಹಿತ. ಮತದಾನ ಮಾಡಿದವನೇ ಹೀರೋ, ಚುನಾವಣೆಯ ಪರ್ವ ದೇಶದ ಗರ್ವ ಮುಂತಾದ ಮತದಾನದ ಜಾಗೃತಿ ಘೋಷಣೆಗಳನ್ನು ಮಕ್ಕಳಿಗೆ ಹೇಳಿಕೊಟ್ಟರು. ಶಿಕ್ಷಕಿ ಸುಮಂಗಲಾ ಅಸಂಗಿ ಮತದಾನ ಪದ್ಧತಿಯು ಹೇಗೆ ನಡೆಯುತ್ತದೆ ಹಾಗೂ ಚುನಾವಣೆಗೆ ನಿಂತ ಅಭ್ಯರ್ಥಿಗಳು ಹೇಗೆ ಚುನಾಯಿತರಾಗುತ್ತಾರೆ ಎಂಬುದನ್ನು ಅಣಕು ಮತಯಂತ್ರ ಪೆಟ್ಟಿಗೆ ಬಳಸಿ ಮಕ್ಕಳಿಗೆ ಅರಿವು ಮೂಡಿಸಿದರು.

ಈ ಸಂದರ್ಭದಲ್ಲಿ ಶಾಲೆಯ ಶಿಕ್ಷಕಿಯರಾದ ರೇಣುಕಾ ವೆಂಕಟಾಪುರ, ಎ.ಎಚ್. ಬಾಗಲಕೋಟಿ, ಬಿಎಡ್ ಪ್ರಶಿಕ್ಷಣಾರ್ಥಿಗಳು, ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# 'ಮಕ್ಕಳ ಕಲರವ' ಬೇಸಿಗೆ ಶಿಬಿರದ ಸಮಾರೋಪ

■ ವಿಜಯಸಾಕ್ಷಿ ಸುದ್ದಿ, ಗದಗ

ನಟರಂಗ ಕಲ್ಚರಲ್ ಅಕಾಡೆಮಿ & ಟ್ರಸ್ಟ್ ಗದಗ ವತಿಯಿಂದ ಮಕ್ಕಳ ಕಲರವ-2024 ಬೇಸಿಗೆ ಶಿಬಿರದ ಸಮಾರೋಪ ಸಮಾರಂಭ ನಾಗಾವಿಯ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ಜರುಗಿತು.

ಸಮಾರಂಭದ ಉದ್ಘಾಟನೆಯನ್ನು ವಿಶ್ವವಿದ್ಯಾಲಯದ ಕುಲಪತಿ ಪ್ರೊ. ವಿಷ್ಣುಕಾಂತ ಎಸ್. ಚಟಪಲ್ಲಿ ನೆರವೇರಿಸಿದರು. ಗೌರವಾಧ್ಯಕ್ಷತೆಯನ್ನು ಸಹಾಯಕ ಪ್ರಾಧ್ಯಾಪಕ ಡಾ. ರಾಜಶೇಖರ ವ್ಯಾಗೇರಿ ಅಧ್ಯಕ್ಷತೆಯನ್ನು ಕುಲಸಚಿವ ಪ್ರೊ. ಡಾ. ಸುರೇಶ




ವಿ.ನಾಡಗೌಡರ, ಹಿರಿಯ ಚಿತ್ರನಟ ದೊಡ್ಡಣ್ಣ, ಬ್ಯಾಡಗಿಯ ಬಿಜೆಪಿ ಮುಖಂಡ ಮುರಿಗೆಪ್ಪ ಶೆಟ್ಟರ್, ಮಲ್ಲಿಕಾರ್ಜುನ ಖಂಡಮ್ಮನವ ಪಾಲ್ಗೊಂಡಿದ್ದರು.

ಕಾರ್ಯಕ್ರ ಮದಲ್ಲಿ ಕಳಸಾಪೂರ ಬಸವಕೇಂದ್ರದ ಕಾರ್ಯಾಧ್ಯಕ್ಷ, ಕನ್ನಡಾಭಿಮಾನಿ ಮಲ್ಲಿಕಾರ್ಜುನ ಖಂಡಮ್ಮನವರವರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಚಿತ್ರನಟ ದೊಡ್ಡಣ್ಣ, ಕನ್ನಡ ಭಾಷೆ ಸಾವಿರಾರು ವರ್ಷಗಳ ಇತಿಹಾಸ ಹೊಂದಿದೆ. ಕನ್ನಡ ಅಭಿಮಾನಿ ಮಲ್ಲಿಕಾರ್ಜುನ ಖಂಡಮ್ಮನವರನ್ನು ಸನ್ಮಾನಿಸುತ್ತಿರುವುದು ನನಗೆ ಅತೀವ ಸಂತಸ ತಂದಿದೆ. ಅವರ ಕನ್ನಡ ಪ್ರೇಮವನ್ನು ಎಷ್ಟು ಹೊಗಳಿದರೂ ಸಾಲದು ಎಂದು ಹೇಳಿದರು.

ಕಾರ್ಯಕ್ರಮದ ಆಯೋಜಕ ನಟರಂಗ್ ಸಂಸ್ಥೆಯ ಅಧ್ಯಕ್ಷ ಸೋಮಶೇಖರ ಚಿಕ್ಕಮಠ ಮಾತನಾಡಿದರು. ಗದುಗಿನ ರೋಟರಿ ಸೆಂಟ್ರಲ್ ಅಧ್ಯಕ್ಷ ವಿಜಯಕುಮಾರ ಹಿರೇಮಠ, ಜಾನಕಿ ಚಿಕ್ಕನಗೌಡ ವೇದಿಕೆಯ ಮೇಲೆ ಉಪಸ್ಥಿತರಿದ್ದರು.

# ಬೇಸಿಗೆ ಶಿಬಿರದ ಮಕ್ಕಳಿಂದ ಹೊರಸಂಚಾರ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಿದ್ಯಾದಾನ ಸಮಿತಿಯ ಕ್ಲಾಸಿಕ್ ಆಂಗ್ಲ ಮಾಧ್ಯಮ ಶಾಲೆಯ ಬೇಸಿಗೆ ಶಿಬಿರದ ಮಕ್ಕಳು ಹಾಗೂ ಶಿಕ್ಷಕರು ಒಂದು ದಿನದ ಹೊರಸಂಚಾರವನ್ನು ಕೈಗೊಂಡರು.

ಸಂಸ್ಥೆಯ ಕಾರ್ಯದರ್ಶಿ ಶ್ರೀನಿವಾಸ ಹುಯಿಲಗೋಳ, ಶೈಕ್ಷಣಿಕ ಮಾರ್ಗದರ್ಶಕ ಪ್ರತೀಕ ಎಸ್. ಹುಯಿಲಗೋಳ, ಶಾಲೆಯ ಮುಖ್ಯೋಪಾಧ್ಯಾಯ ಎಂ.ಆರ್. ಡೊಳ್ಳಿನ ಮಕ್ಕಳಿಗೆ ಶುಭಾಶಯ ಕೋರಿದರು. ಈ ಸಂದರ್ಭದಲ್ಲಿ ಶಾಲೆಯ ಬೇಸಿಗೆ ಶಿಬಿರದ ಶಿಕ್ಷಕರು/ಸಿಬ್ಬಂದಿ ವರ್ಗದವರು, ಪಾಲಕರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.




ಒಂದು ದಿನದ ಹೊರಸಂಚಾರವನ್ನು ಗದಗ ನಗರದ ಹೊರ ವಲಯದಲ್ಲಿರುವ ಸಬರಮತಿ ಆಶ್ರಮ ಹಾಗೂ ಬಿಂಕದಕಟ್ಟಿ ಕಿರು ಮೃಗಾಲಯಕ್ಕೆ ಭೇಟಿ ನೀಡಿ, ಮನೋರಂಜನೆ ಜೊತೆಗೆ ಜ್ಞಾನವನ್ನು ಹೆಚ್ಚಿಸಿಕೊಂಡರು. ಮಕ್ಕಳು ಸಬರಮತಿ ಆಶ್ರಮದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ ಬಾಲ್ಯ ಜೀವನ, ಸ್ವಾತಂತ್ರ್ಯ ಹೋರಾಟದ ಹಾದಿ, ವೃತ್ತಿ ಮತ್ತು ಬದುಕು ಮುಂತಾದ ಅಂಶಗಳ ಕುರಿತು ದೂರದರ್ಶನದಲ್ಲಿ ವೀಕ್ಷಿಸಿ, ಗೋಡೆ ಮೇಲೇರುವ ಸಾಕ್ಷ್ಯ ಚಿತ್ರಪಟಗಳನ್ನು ಓದಿ, ಮನನ ಮಾಡಿಕೊಂಡರು.

## ಪ್ರಜ್ವಲ್ ರೇವಣ್ಣ ಪ್ರಕರಣ: ದೇವೇಗೌಡ, ಕುಮಾರಸ್ವಾಮಿ ಹೆಸರು ಬಳಸದಂತೆ ಕೋರ್ಟ್ ನಿರ್ಬಂಧ



■ ವಿಜಯಸಾಕ್ಷಿ ಸುದ್ದಿ, ನಿರ್ಬಂಧ

ದೇಶದಲ್ಲೇ ಭಾರೀ ಸುದ್ದಿಯಾಗಿರುವ ಪ್ರಜ್ವಲ್ ರೇವಣ್ಣ ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ಮಾಜಿ ಪ್ರಧಾನಿ ಹೆಚ್. ಡಿ.ದೇವೇಗೌಡ ಹಾಗೂ ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಹೆಸರು ಬಳಸದಂತೆ ಕೋರ್ಟ್ ನಿರ್ಬಂಧ ವಿಧಿಸಿದೆ.

ಪ್ರಕರಣಕ್ಕೆ ಸಂಬಂಧಿಸಿ ಮಾಧ್ಯಮಗಳು ತಮ್ಮ ಹೆಸರು ಬಳವುದನ್ನು ನಿರ್ಬಂಧಿಸುವವಂತೆ ಕೋರಿ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಮತ್ತು ಎಚ್.ಡಿ.ಕುಮಾರಸ್ವಾಮಿ ನ್ಯಾಯಾಲಯದ ಮೊರೆ ಹೋಗಿದ್ದರು. ಪ್ರಕರಣಕ್ಕೂ ನಮಗೂ ಯಾವುದೇ ಸಂಬಂಧ ಇಲ್ಲ. ಮಾಧ್ಯಮಗಳಲ್ಲಿ ತಮ್ಮ ಹೆಸರು ಬಳಸುವುದರಿಂದ ತಮ್ಮ ಘನತೆ, ಗೌರವಕ್ಕೆ ಧಕ್ಕೆಯಾಗುತ್ತಿದೆ. ನಮಗೆ ಸಮಾಜದಲ್ಲಿ ಉತ್ತಮ ಗೌರವ ಇದೆ. ಗೌರವಾನ್ವಿತ ಕುಟುಂಬದಿಂದ ಬಂದಿದ್ದೇವೆ. 70 ವರ್ಷಗಳಿಂದ ಸಾರ್ವಜನಿಕ ಜೀವನದಲ್ಲಿರುವ ಕಕ್ಷಿದಾರರ ಬಗ್ಗೆ ಯಾವುದೇ ಆರೋಪಗಳಿಲ್ಲ ಎಂದು ಕೋರ್ಟ್‌ನಲ್ಲಿ ಹೇಳಲಾಗಿದೆ.

ಲೈಂಗಿಕ ದೌರ್ಜನ್ಯ ಪ್ರಕರಣ ಬಯಲಾಗುತ್ತಿದ್ದಂತೆ ರೇವಣ್ಣ ಮತ್ತು ಅವರ ಕುಟುಂಬದಿಂದ ದೇವೇಗೌಡ ಮತ್ತು ಕುಮಾರಸ್ವಾಮಿ ದೂರ ಉಳಿದಿದ್ದಾರೆ. ಫಿರ್ಯಾದಿದಾರರು ಸಾರ್ವಜನಿಕ ಹೇಳಿಕೆಗಳನ್ನು ನೀಡುವ ಮೂಲಕ ಸಮಸ್ಯೆಯಿಂದ ದೂರ ಸರಿದಿದ್ದರೂ, ಪ್ರತಿವಾದಿಗಳು ಪದೇ ಪದೇ ಮತ್ತು ಉದ್ದೇಶಪೂರ್ವಕವಾಗಿ ಲಿಂಕ್ ಮಾಡುತ್ತಿದ್ದಾರೆ ಎಂದು ಕೋರ್ಟ್ ಗಮನಕ್ಕೆ ತರಲಾಗಿದೆ.

ಈ ಕುರಿತು ಅರ್ಜಿ ವಿಚಾರಣೆ ನಡೆಸಿದ ಸೆಷನ್ಸ್ ಕೋರ್ಟ್‌ನ ನ್ಯಾಯಾಧೀಶರು ಹೆಚ್.ಡಿ ದೇವೇಗೌಡ ಮತ್ತು ಎಚ್. ಡಿ ಕುಮಾರಸ್ವಾಮಿ ಹೆಸರು ಬಳಸಂತೆ ಎಲೆಕ್ಟ್ರಾನಿಕ್ ಮಾಧ್ಯಮಗಳು, ಪತ್ರಿಕೆಗಳು ಮತ್ತು ಸಾಮಾಜಿಕ ಜಾಲತಾಣಗಳಿಗೆ ಮಧ್ಯಂತರ ತಡೆಯಾಜ್ಞೆಯನ್ನು ನೀಡಿದೆ.

ಪ್ರಜ್ವಲ್ ರೇವಣ್ಣ ಅವರು ಲೈಂಗಿಕ ದೌರ್ಜನ್ಯ ಎಸಗಿರುವ ವಿಡಿಯೋಗಳ ವೈರಲ್ ಬಳಿಕ ವಿದೇಶದಲ್ಲಿ ತಲೆ ಮರೆಸಿಕೊಂಡಿದ್ದಾನೆ. ಎಚ್‌ಡಿ ರೇವಣ್ಣ ಅವರನ್ನು ಎರಡು ದಿನಗಳ ಹಿಂದೆ ಪ್ರಜ್ವಲ್ ಲೈಂಗಿಕ ದೌರ್ಜನ್ಯ ನಡೆಸಿದ್ದ ಎನ್ನಲಾದ ಮಹಿಳೆಯನ್ನು ಅಪಹರಿಸಿರುವ ಆರೋಪದಲ್ಲಿ ಬಂಧಿಸಲಾಗಿದೆ. ಪ್ರಜ್ವಲ್ ರೇವಣ್ಣ ವಿರುದ್ಧ 'ಬ್ಲೂ ಕಾರ್ನರ್ ನೋಟಿಸ್' ಜಾರಿ ಮಾಡಲಾಗಿದ್ದು, ಆತನ ಬಂಧನಕ್ಕೆ ದೇಶದಲ್ಲಿ ಭಾರೀ ಕೂಗು ಕೇಳಿ ಬಂದಿದೆ.

# ಶ್ರೀ ಸಿದ್ಧಾರೂಢರ ಮಹಾರಥೋತ್ಸವ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಮಾಡಳ್ಳಿ ಗ್ರಾಮದ ಶ್ರೀ ಸಿದ್ಧಾರೂಡ ಮಠದಲ್ಲಿ ಶಿವನಾಮ ಸ್ಮರಣೆ ಸಪ್ತಾಹದ ಅಂಗವಾಗಿ ಮೇ.7ರಂದು ಬೆಳಿಗ್ಗೆಯಿಂದ ವಿಶೇಷ ಪೂಜೆ, ಪ್ರಸಾದ, ಸಂಜೆ ಉಪನ್ಯಾಸ, ಕೀರ್ತನೆ ನಡೆಯುವುದು. ಮೇ 8ರಂದು ಸಂಜೆ 5.30ಕ್ಕೆ ಶ್ರೀ ಸಿದ್ಧಾರೂಢರ ಮಹಾರಥೋತ್ಸವ ನಡೆಯುವುದು. ಮೇ.9ರಂದು ಕಡುಬಿನ ಕಾಳಗ ಹಾಗೂ ಕೌದಿ ಪಡೆಯೊಂದಿಗೆ ಮಂಗಲಗೊಳ್ಳುವದು.

ಅಣ್ಣಿಗೇರಿಯ ದಾಸೋಹಮಠದ ಶ್ರೀ ಶಿವಕುಮಾರ ಮಹಾಸ್ವಾಮಿಗಳು ಮತ್ತು ವರವಿ ಮೌನೇಶ್ವರದ ಮಠದ ಶ್ರೀ ವಿರುಪಾಕ್ಷೇಶ್ವರ ಸ್ವಾಮಿಗಳು ಸಾನ್ನಿಧ್ಯ ವಹಿಸುರು. ಸೂರಶೆಟ್ಟಿಕೊಪ್ಪ ಸಿದ್ಧಾರೂಢಮಠದ ಶ್ರೀ ಶಿವಲಿಂಗೇಶ್ವರ ಮಹಾಸ್ವಾಮಿಗಳು ಕೀರ್ತನಗೈಯುವರು. ಗುರುನಾಥ ಶಾಸ್ತ್ರಿಗಳು ಪ್ರವಚನ ಮಾಡುವರು. ರಾಮಣ್ಣ ಮಾಸ್ತರ ಅಣ್ಣಿಗೇರಿ ಭಜನಾ ಸೇವೆ ಮಾಡುವರು. 3 ದಿನಗಳ ಕಾಲ ನಡೆಯುವ ಜಾತ್ರಾಮಹೋತ್ಸವ ಕಾರ್ಯಕ್ರಮದಲ್ಲಿ ಜನರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಮಾಡಳ್ಳಿಯ ಶ್ರೀ ಸಿದ್ಧಾರೂಢ ಸ್ವಾಮಿ ಟ್ರಸ್ಟ್ ಕಮಿಟಿ ಪ್ರಕಟಣೆಯಲ್ಲಿ ತಿಳಿಸಿದೆ.

### ಬಸವ ದಳದ 1592ನೇ ಶರಣ ಸಂಗಮದಲ್ಲಿ ಡಾ. ರಾಜೇಂದ್ರ ಗಡಾದ

# ಬಸವಣ್ಣನವರ ಧರ್ಮ ವಿಶ್ವಧರ್ಮ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸಾಂಸ್ಕೃತಿಕ ನಾಯಕ ಎಂದು ಗುರುತಿಸಿಕೊಂಡಿರುವ ವಿಶ್ವಗುರು ಬಸವಣ್ಣನವರ ಧರ್ಮ ವಿಶ್ವಧರ್ಮ. ಅಂತೆಯೇ ಅವರ ಸಂದೇಶ ವಿಶ್ವ ಸಂದೇಶ. ಆ ಧರ್ಮ ವಿಶ್ವ ಸಾಧ್ಯವಾದುದು, ವಿಶ್ವ ವೇದ್ಯವಾದುದು. ಅದಕ್ಕೆ ಎಲ್ಲೆ-ಕಟ್ಟುಗಳಿಲ್ಲ, ನಾಮ-ಸೀಮೆಗಳಿಲ್ಲ. ಅವರ ದೃಷ್ಟಿಯಲ್ಲಿ ಮೃದುವಚನಗಳೇ ಸಕಲ ಜಪತಪಂಗಳು. ಸದುವಿನಯವೇ ಸದಾಶಿವನೊಲುಮೆ. ಬಸವಣ್ಣನವರ ಧರ್ಮನೀತಿ ಮೃದುವಚನ, ಸದ್ವಿನಯ, ಸದಾಚಾರಗಳಲ್ಲಿ ಅಡಗಿದೆ ಎಂದು ಅಖಿಲ ಭಾರತ ವಚನ ಸಾಹಿತ್ಯ ಮತ್ತು ಸಾಂಸ್ಕೃತಿಕ ಪರಿಷತ್ತಿನ ಜಿಲ್ಲಾ ಘಟಕದ ಅಧ್ಯಕ್ಷ ಡಾ. ರಾಜೇಂದ್ರ ಗಡಾದ ಅಭಿಪ್ರಾಯಪಟ್ಟರು..

ನಗರದ ಬಸವ ದಳ, ತಾಲೂಕಾ ಶರಣ ಸಾಹಿತ್ಯ ಪರಿಷತ್ತು, ಜಿಲ್ಲಾ ಜಾಗತಿಕ ಲಿಂಗಾಯತ ಮಹಾಸಭೆಯ ಆಶ್ರಯದಲ್ಲಿ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಹಮ್ಮಿಕೊಂಡಿದ್ದ ಬಸವ ದಳದ 1592ನೇ ಶರಣ ಸಂಗಮದಲ್ಲಿ 'ಕರ್ನಾಟಕ ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರ 919ನೇ ಜಯಂತಿ' ಕುರಿತು ಉಪನ್ಯಾಸ ನೀಡಿದರು.

ಕಾಲ್ ಮಾರ್ಕ್ಸ್ ಮಾರ್ಟಿನ್ ಲೂಥರ್ ಕಿಂಗ್ ಮೊದಲಾದವರಿಗೂ ಮುಂಚೆಯೇ ಜಗತ್ತಿಗೆ ಮೊದಲ ಪಾರ್ಲಿಮೆಂಟನ್ನು ರಚಿಸಿಕೊಟ್ಟವರು ಬಸವಣ್ಣನವರು. ಸುಮಾರು 850 ವರ್ಷಗಳ ಹಿಂದೆಯೇ ಕಲ್ಯಾಣದಲ್ಲಿ ವಚನ ಕ್ರಾಂತಿ ಚಳುವಳಿಗಳ ಮೂಲಕ ಬಹುದೊಡ್ಡ ಕ್ರಾಂತಿಕಾರಕ ಬದಲಾವಣೆಯ ನೇತೃತ್ವ ವಹಿಸಿ, ಯಶಸ್ವಿಯಾಗಿ, ಸಮಾನತೆಯ ಸೌಧವನ್ನು ಕಟ್ಟಿದರು. ಈ ದೇಶದಲ್ಲಿ ಹುಟ್ಟಿದ ಅನೇಕ ಸಂತರು, ಸಾಧುಗಳು ಪುರೋಹಿತಶಾಹಿಗೆ ಹೆದರಿ ಅದನ್ನ ತಲೆಯ ಮೇಲೆ ಹೊತ್ತುಕೊಂಡು ಮೆರೆದರೆ, ಬಸವಣ್ಣನವರೊಬ್ಬರೇ ಅದನ್ನು ಸಾರಾಸಗಟಾಗಿ ನಾಶ ಮಾಡಬೇಕೆಂದು ಹೊರಟ ಧರ್ಮವೀರರು ಎಂದು ವಿಶ್ಲೇಷಣೆ ನೀಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಸಾಮಾಜಿಕ ಕಾರ್ಯಕರ್ತ ಬಸವರಾಜ ಹಿರೇಹಡಗಲಿ ಹಾಗೂ ನೀಲಕ್ಕ ಮಳಲಿ ಅವರು ಸಾಂದರ್ಭಿಕವಾಗಿ ಮಾತನಾಡಿದರು. ಆರಂಭದಲ್ಲಿ ಭಕ್ತಿ ಆಲತಗಿ ವಚನ ಪಠಣ ಮಾಡಿದರೆ, ವಚನ ಪ್ರಾರ್ಥನೆಯನ್ನು ಶರಣೆ ಗಂಗಮ್ಮ ಹೂಗಾರ ಮಾಡಿದರು. ಶರಣ ಎಂ.ಬಿ. ಲಿಂಗಧಾಳ ಸ್ವಾಗತಿಸಿದರು. ಶರಣ ಸಾಹಿತ್ಯ ಪರಿಷತ್ ತಾಲೂಕಾ ಅಧ್ಯಕ್ಷ ಪ್ರಕಾಶ್ ಅಸುಂಡಿ ಪ್ರಸ್ತಾವಿಕ ನುಡಿಗಳನ್ನು ನುಡಿದರು. ಶರಣ ಎಸ್.ಎ. ಮುಗದ ಕಾರ್ಯಕ್ರಮ ನಿರೂಪಿಸಿದರು. ಗೌರಕ್ಕ ಬಡಿಗಣ್ಣವರ ಶರಣು ಸಮರ್ಪಣೆ ಗೈದರು.

ಕಾರ್ಯಕ್ರಮದಲ್ಲಿ ಶರಣರಾದ ಎಸ್.ಎನ್. ಹಕಾರಿ, ಎನ್.ಎಚ್. ಹಿರೇಸಕ್ಕರಗೌಡ್ರ, ಬಿ.ವಿ. ಕಾಮಣ್ಣವರ, ಎನ್.ಎಸ್. ಬಡಿಗಣ್ಣವರ, ಡಾ. ಆರ್.ಎಸ್. ದಾನರಡ್ಡಿ, ಮಲ್ಲಣ್ಣ ಜಿನಗಾ, ಮಹಾಂತೇಶ ಅಂಗಡಿ, ಮಂಜುನಾಥ ಅಸುಂಡಿ, ಶರಣು ಅಂಗಡಿ, ಅಲ್ಲಮ ಬಡಿಗಣ್ಣವರ, ಶರಣೆಯರಾದ ಸರೋಜಕ್ಕ ಲಿಂಗಧಾಳ, ಲಕ್ಷ್ಮೀ ಅಂಗಡಿ, ಮಂಗಳಕ್ಕ ಕಾಮಣ್ಣವರ, ಮಂಜುಳಾ ಹಾಸಿಲಕರ, ಸಹನಾ ಆಲತಗಿ, ರೇಣುಕಾ ಹಾಸಿಲಕರ, ಶಿಲ್ಪಾ ಬಡಿಗಣ್ಣವರ, ಭಾಗ್ಯಶ್ರೀ ಬಡಿಗಣ್ಣವರ ಮುಂತಾದವರು ಉಪಸ್ಥಿತರಿದ್ದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ವಿ.ಕೆ. ಕರಿಗೌಡ್ರ ಮಾತನಾಡಿ, ಬಸವಣ್ಣನವರು ಈ ನಾಡು ಕಂಡ ಕ್ರಾಂತಿಕಾರಿಗಳಲ್ಲಿ ಒಬ್ಬರಾಗಿದ್ದು, ಅವರು ಮಾಡಿರುವ ಸಾಧನೆಯನ್ನು ಯಾವ ನಿಟ್ಟಿನಿಂದ ನೋಡಿದರೂ ಅದು ಅನುಪಮವಾಗಿದೆ. ಅವರ ಕೊಡುಗೆ ಈ ವಿಶ್ವಕ್ಕೆ ಅಮೋಘವಾಗಿದೆ. ವಚನ ಸಾಹಿತ್ಯವಂತೂ ತುಂಬಾ ಶ್ರೇಷ್ಠವಾಗಿದೆ ಎಂದರು.

## ತಮಿಳುನಾಡಿನ ಜಿಲ್ಲಾಧಿಕಾರಿಗಳಿಗೆ ಅನಾವಶ್ಯಕ ಕಿರುಕುಳ: ED ಅಧಿಕಾರಿಗಳಿಗೆ ಸುಪ್ರೀಂಕೋರ್ಟ್ ತರಾಟೆ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಅಕ್ರಮ ಮರಳು ಗಣಿಗಾರಿಕೆ ಪ್ರಕರಣದಲ್ಲಿ ಸಮನ್ಸ್ ಪಡೆದಿರುವ ಜಿಲ್ಲಾಧಿಕಾರಿಗಳಿಗೆ ತಮ್ಮ ಕಚೇರಿಯ ಹೊರಗೆ ಬಹಳ ಗಂಟೆಗಳ ಕಾಲ ಕಾಯುವಂತೆ "ಅನಾವಶ್ಯಕ ಕಿರುಕುಳ" ನೀಡಬೇಡಿ ಎಂದು ಸುಪ್ರೀಂಕೋರ್ಟ್ ಸೋಮವಾರ ಜಾರಿ ನಿರ್ದೇಶನಾಲಯದ ಅಧಿಕಾರಿಗಳಿಗೆ ಸೂಚನೆಯನ್ನು ನೀಡಿದೆ. ಇಡಿಯಿಂದ ಸಮನ್ಸ್ ಪಡೆದಿರುವ ಜಿಲ್ಲಾಧಿಕಾರಿಗಳನ್ನು ಬೆಳಗ್ಗೆ 8ರಿಂದ ಸಂಜೆ 6ರವರೆಗೆ ಜಾರಿ ನಿರ್ದೇಶನಾಲಯದ ಕಚೇರಿಯ ಮುಂದೆ ಕಾಯುವಂತೆ ಮಾಡಲಾಗುತ್ತಿದೆ ಎಂದು ತಮಿಳುನಾಡು ಸರ್ಕಾರ ದೂರು ನೀಡಿದ ನಂತರ ನ್ಯಾಯಮೂರ್ತಿ ಬೇಲಾ ಎಂ ತ್ರಿವೇದಿ ಮತ್ತು ಪಂಕಜ್ ಮಿಥಾಲ್ ಅವರ ಪೀಠ 'ಇಡಿ' ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದೆ.

### ಧಾರವಾಡ ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ವಿಶೇಷ ಮತಗಟ್ಟೆಗಳು

# ಆಕರ್ಷಿಸುತ್ತಿರುವ ವಿಶೇಷ ಸಖಿ ಮತಗಟ್ಟೆಗಳು

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಮಹಿಳೆಯರು ಮತ್ತು ವಿಕಲಚೇತನರು ದುರ್ಬಲರಲ್ಲ, ಅವರು ಉಳಿದವರಷ್ಟೇ ಸಮರ್ಥರು. ಯಾವ ಕೆಲಸವನ್ನಾದರೂ ಸಂಪೂರ್ಣವಾಗಿ ಮಾಡಬಲ್ಲರು ಎಂಬುದನ್ನು ಸಾರಲು ಈ ಬಾರಿ ಧಾರವಾಡ ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಮಹಿಳಾ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಂದಲೇ ನಡೆಸಲ್ಪಡುವ 35 ಸಖಿ ಮತಗಟ್ಟೆಗಳು, ವಿಕಲಚೇತನ ಅಧಿಕಾರಿಗಳು ಮತ್ತು ಸಿಬ್ಬಂದಿಯಿಂದಲೇ ನಿಭಾಯಿಸಲ್ಪಡುವ 7 ವಿಕಲಚೇತನರ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ವಿಶೇಷವಾಗಿ ಅಲಂಕರಿಸಲ್ಪಟಿರುವ ಈ ಮತಗಟ್ಟೆಗಳು ಜನರನ್ನು ಮತದಾನಕ್ಕೆ ಆಕರ್ಷಿಸುತ್ತಿವೆ.

ಆಕರ್ಷಕ ಸ್ವಾಗತ ಕಮಾನು, ರಂಗೋಲಿ, ವರ್ಣಮಯ ಕಾಗದ, ಬಲೂನುಗಳಿಂದ ಮತಗಟ್ಟೆಗಳನ್ನು ಸಿಂಗರಿಸಿದ್ದಾರೆ. ಪಾಲಕರೊಂದಿಗೆ ಬರುವ ಮಕ್ಕಳಿಗೆ ಆಟವಾಡಲು ಕಿಡ್ಸ್ ಕಾರ್ನರ್ ಸ್ಥಾಪಿಸಲಾಗಿದೆ. ಮಕ್ಕಳಿಗೆ ಚಾಕಲೇಟ್ ವಿತರಣೆಗೆ ತಯಾರಿ ಮಾಡಿಕೊಂಡಿದ್ದಾರೆ. ಮತಗಟ್ಟೆಯಲ್ಲಿ ಮಹಿಳಾ ಅಧಿಕಾರಿ, ಸಿಬ್ಬಂದಿ ಹಾಗೂ ಮಹಿಳಾ ಪೊಲೀಸ್ ಪೇದೆ ಕರ್ತವ್ಯ ನಿರ್ವಹಿಸಲಿದ್ದಾರೆ.




ಜಿಲ್ಲೆಯಲ್ಲಿ ಒಟ್ಟು 35 ಸಖಿ ಮತಗಟ್ಟೆಗಳು, 7 ವಿಕಲಚೇತನ ಮತಗಟ್ಟೆಗಳಿವೆ. ಮಹಿಳೆಯರು ಮತ್ತು ವಿಕಲಚೇತನರು ಎಲ್ಲರ ಮುಂದೆ ತಮ್ಮ ಸಾಮರ್ಥ್ಯ ಸಾಬೀತುಪಡಿಸಲು ಅವಕಾಶವಾಗಿದೆ. ವಿಕಲಚೇತನರನ್ನು ಮನೆಯಿಂದ ಮತಗಟ್ಟೆಗೆ ಕರೆತರಲು ವಾಹನ, ಗಾಲಿಖುರ್ಚಿ, ರ್ಯಾಂಪ್, ಭೂತಕನ್ನಡಿ ಮೊದಲಾದ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ.

ಕಲಘಟಗಿ ಪಟ್ಟಣ ಪಂಚಾಯಿತಿ ಮತಗಟ್ಟೆಯಲ್ಲಿ ಪ್ರಸಿದ್ಧ ತೊಟ್ಟಿಲು ಮಾದರಿಗಳು ಗಮನ ಸೆಳೆಯುತಿವೆ. ನೆಲ್ಲಿಹರವಿಯ ಸರ್ಕಾರಿ ಲೋವರ್ ಪ್ರೈಮರಿ ಶಾಲೆಯ ಮತಗಟ್ಟೆ ಕೇಂದ್ರ 224ರಲ್ಲಿ ಸಿಬ್ಬಂದಿಗಳು ಲಂಬಾಣಿ ಸಾಂಪ್ರದಾಯಿಕ ಉಡುಪು ಧರಿಸಿರುವುದು ಸಹ ಆಕರ್ಷಣೀಯವಾಗಿದೆ ಎಂದು ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರಾಗಿರುವ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ. ಹೇಳಿದರು.

ಬೆಳಿಗ್ಗೆ 7ರಿಂದ ಸಂಜೆ 6 ಗಂಟೆಯವರೆಗೆ ನಡೆಯುವ ಮತದಾನದಲ್ಲಿ ಪ್ರತಿಯೊಬ್ಬ ಮತದಾರರೂ ತಮ್ಮ ಮತ ಚಲಾಯಿಸಿ ಪ್ರಜಾಪ್ರಭುತ್ವ ವ್ಯವಸ್ಥೆ ಗಟ್ಟಿಗೊಳಿಸುವ ಕಾರ್ಯ ಮಾಡಬೇಕಾಗಿದೆ.

ಅಮರಗೋಳದಲ್ಲಿ ಮಾವಿನ ತಳಿರು-ತೋರಣ, ರಂಗವಲ್ಲಿ, ಬಲೂನು ಸೇರಿ ಬಗೆ ಬಗೆಯ ವಸ್ತುಗಳಿಂದ ವಿಕಲಚೇತನರ ಮತಗಟ್ಟೆಯನ್ನು ಅಲಂಕರಿಸಲಾಗಿದೆ. ಹೆಬ್ಬಳ್ಳಿ ಜನತಾ ಪ್ಲಾಟ್‌ನಲ್ಲಿ ಹಾಗೂ ಧಾರವಾಡ ಮರಾಠಾ ಕಾಲೋನಿಯ ಮಲ್ಲಸಜ್ಜನ ವ್ಯಾಯಾಮ ಶಾಲೆ ಮತ್ತು ಹುಬ್ಬಳ್ಳಿಯ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಕಚೇರಿಯ ಮತಗಟ್ಟೆಗಳು ತುಂಬಾ ಆಕರ್ಷಣೀಯವಾಗಿವೆ.

# ಸಂಭ್ರಮದ ಅಲ್ಲಮಪ್ರಭುದೇವರ ರಥೋತ್ಸವ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಅಲ್ಲಪ್ರಭು ದೇವರ ಮಠದ ಲಿಂಗೈಕ್ಯ ಬಸವರಾಜೇಂದ್ರ ಮಹಾಸ್ವಾಮಿಗಳ 12ನೇ ವರ್ಷದ ಪುಣ್ಯ ಸ್ಮರಣೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ರಥೋತ್ಸವವು ಸಂಭ್ರಮದಿಂದ ಜರುಗಿತು.



ಶ್ರೀ ಮಠದಿಂದ ಚೌಕಿಮಠದವರೆಗೂ ಸಾಗಿದ ರಥಕ್ಕೆ ಭಕ್ತಾಧಿಗಳು ಉತ್ತತ್ತಿ ಎಸೆದು ತಮ್ಮ ಭಕ್ತಿಯನ್ನು ಸಮರ್ಪಿಸಿದರು. ಡೊಳ್ಳು ಮೇಳ, ಜಾಂಜ್ ಮೇಳ ಸೇರಿದಂತೆ ವಿವಿಧ ಜಾನಪದ ಕಲಾ ತಂಡಗಳು ಭಾಗವಹಿಸಿದ್ದವು. ಶ್ರೀ ಮಠದ ಸಿದ್ಧಲಿಂಗೇಶ್ವರ ಶ್ರೀಗಳು ರಥೋತ್ಸವಕ್ಕೆ ಚಾಲನೆ ನೀಡಿದರು. ಇದಕ್ಕೂ ಪೂರ್ವ ಅಲ್ಲಮಪ್ರಭುದೇವರ ಹಾಗೂ ಬಸವರಾಜೇಂದ್ರ ಸ್ವಾಮೀಜಿಗಳ ಗದ್ದುಗೆಗೆ ಅಭಿಷೇಕ, ವಿಶೇಷ ಪೂಜೆ ನೆರವೇರಿತು.

ನಂತರ ಹೊಸಳ್ಳಿ ಬೂದೀಶ್ವರ ಮಹಾಸ್ವಾಮಿಗಳ ನೇತೃತ್ವದಲ್ಲಿ ಸಾಮೂಹಿಕ ವಿವಾಹ ಜರುಗಿತು. ಇದಕ್ಕೂ ಪೂರ್ವ ಕಳೆದ 11 ದಿನಗಳಿಂದ ನಡೆದ ನವಲಗುಂದ ಅಜಾತ ನಾಗಲಿಂಗ ಜೀವನ ದರ್ಶನ ಪ್ರವಚನವನ್ನು ಗದಗ ಆಧ್ಯಾತ್ಮ ವಿದ್ಯಾಶ್ರಮದ ಶಿವಶರಣೆ ಡಾ ನೀಲಮ್ಮ ತಾಯಿ ಅವರು ಮಂಗಲಗೊಳಿಸಿದರು.

ಸುಮಂಗಲಿ ಯರಿಂದ ಪೂರ್ಣ ಕುಂಭ ಮೆರವಣಿಗೆಯೊಂದಿಗೆ ಅಡ್ಡಪಲ್ಲಕ್ಕಿ ಮಹೋತ್ಸವವು ಜರುಗಿತು. ಈ ಸಂದರ್ಭದಲ್ಲಿ ಆದಿಶಕ್ತಿ ಬಳಗದ ಮಹಿಳೆಯರು ಲಲಿತಾ ಸಹಸ್ರನಾಮಾವಳಿಯನ್ನು ಪಠಣ ಮಾಡಿದರು. ಹರ್ಲಾಪೂರ ಕೊಟ್ಟೂರೇಶ್ವರ ಮಠದ ಡಾ ಕೊಟ್ಟೂರೇಶ್ವರ ಶ್ರೀಗಳು, ಹೊಸರಿತ್ತಿಯ ಗುದ್ದಲೀಶ್ವರ ಶ್ರೀಗಳು ಸಿದ್ಧಲಿಂಗೇಶ್ವರ ಶ್ರೀಗಳು ಪಾಲ್ಗೊಂಡಿದ್ದರು.

# ಶಾಂತಿಯುತವಾಗಿ ನಡೆದ ನೀಟ್ ಪರೀಕ್ಷೆ

■ವಿಜಯಸಾಕ್ಷಿ ಸುದ್ದಿ, ಗದಗ

ವಿಜಯಸಾಕ್ಷಿ ಸುದ್ದಿ, ಜಿಲ್ಲೆಯಲ್ಲಿ ರವಿವಾರದಂದು ವೈದ್ಯಕೀಯ ಶಿಕ್ಷಣ ಪ್ರವೇಶಾತಿ (ನೀಟ್) ಪರೀಕ್ಷೆಯು ಅತ್ಯಂತ ಶಾಂತಿಯುತವಾಗಿ ಮತ್ತು ಯಶಸ್ವಿಯಾಗಿ ನಡೆಯಿತು ಎಂದು ಗದಗ ಜಿಲ್ಲಾ ನೀಟ್ ಪರೀಕ್ಷಾ ಸಂಯೋಜಕರಾದ ಕಲ್ಪನಾ ಚಚಡಿ ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಸೆಂಟ್ ಜಾನ್ ಪ್ರೌಢಶಾಲೆ, ಜಗದ್ಗುರು ತೋಂಟದಾರ್ಯ ಪಾಲಿಟೆಕ್ನಿಕ್ ಮಹಾವಿದ್ಯಾಲಯ, ಪಾರ್ಶ್ವನಾಥ ಆಂಗ್ಲ ಮಾಧ್ಯಮ ಶಾಲೆ, ಆದರ್ಶ ಶಿಕ್ಷಣ ಸಮಿತಿಯ ಪದವಿಪೂರ್ವ ಮಹಾವಿದ್ಯಾಲಯ, ಬಾಲವಿನಾಯಕ ವಿದ್ಯಾನಿಕೇತನ, ಲಯನ್ಸ ಶಿಕ್ಷಣ ಸಂಸ್ಥೆಯ ಜಿ.ಡಿ ಶಾ ಪ್ರೌಢಶಾಲೆ ಮತ್ತು ಕೆಎಲ್‌ಇ ಶಾಲೆಯು ಪರೀಕ್ಷಾ ಕೇಂದ್ರಗಳಾಗಿದ್ದು, ಪರೀಕ್ಷೆಗೆ ನೋದಣಿಯಾದ ಒಟ್ಟು 1883 ವಿದ್ಯಾರ್ಥಿಗಳಲ್ಲಿ 1829 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 54 ವಿದ್ಯಾರ್ಥಿಗಳು ಗೈರುಹಾಜರಾಗಿದ್ದರು.

ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಜಿಲ್ಲಾಧಿಕಾರಿಗಳು ನಿಷೇಧಾಜ್ಞೆ ಜಾರಿ ಮಾಡಿದ್ದು ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಸಹಕಾರದಿಂದ ಪರೀಕ್ಷೆಯು ಅತ್ಯಂತ ಸುಗಮವಾಗಿ ಜರುಗಿತು ಎಂದು ತಿಳಿಸಿದ್ದಾರೆ.

### ಕಸಾಪ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಶಿವಾನಂದ ಗಿಡ್ನಂದಿ

# ಕರ್ನಾಟಕದ ಏಳ್ಗೆಯೇ ಪರಿಷತ್ತಿನ ಗುರಿ

■ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡ, ಕನ್ನಡಿಗ, ಕರ್ನಾಟಕ ವಿಷಯಕ್ಕೆ ಸಂಬಂಧಿಸಿದಂತೆ ಪೂರಕ ಕಾರ್ಯಕ್ರಮಗಳನ್ನು ಹಾಗೂ ಹೋರಾಟಗಳನ್ನು ರೂಪಿಸಿಕೊಂಡು ಬಂದು ಕನ್ನಡಿಗರಲ್ಲಿ ಕನ್ನಡದ ಪ್ರಜ್ಞೆಯನ್ನು ಸದಾ ಜೀವಂತವಾಗಿರುವ ಕಾರ್ಯವನ್ನು ಪರಿಷತ್ತು ಶತಮಾನದಿಂದ ಮಾಡುತ್ತಾ ಬಂದಿದೆ. ಪುಸ್ತಕ ಪ್ರಕಟನೆ, ಸಮ್ಮೇಳನ, ಕಾರ್ಯಾಗಾರ, ವಿಚಾರ ಸಂಕಿರಣ ಮುಂತಾದ ಕಾರ್ಯಚಟುವಟಿಕೆಗಳು ಪರಿಷತ್ತಿನ ಜೀವಾಳವಾಗಿವೆ ಎಂದು ಜಿಲ್ಲಾ ಗೌರವ ಕಾರ್ಯದರ್ಶಿ ಶಿವಾನಂದ ಗಿಡ್ನಂದಿ ಹೇಳಿದರು.

ಅವರು ಜಿಲ್ಲಾ ಹಾಗೂ ತಾಲೂಕಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಕಸಾಪ ಕಾರ್ಯಾಲಯದ ತೋಂಟದ ಸಿದ್ಧಲಿಂಗ ಶ್ರೀಗಳ ಕನ್ನಡ ಭವನದಲ್ಲಿ ಜರುಗಿದ ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ 'ಜನಸಾಮಾನ್ಯರತ್ತ ಕನ್ನಡ ಸಾಹಿತ್ಯ ಪರಿಷತ್ತು' ಎಂಬ ವಿಷಯದ ಕುರಿತು ಮಾತನಾಡಿದರು.

ಕಳೆದ ಸಾಲಿನಲ್ಲಿ ಅತಿ ಹೆಚ್ಚು ಕನ್ನಡದ ಕಾರ್ಯಕ್ರಮಗಳನ್ನು ಸಂಘಟನೆ ಮಾಡಿರುವ ಹಿನ್ನೆಲೆಯಲ್ಲಿ ಮುಂಡರಗಿ ತಾಲೂಕಾ ಕಸಾಪ ಅಧ್ಯಕ್ಷ ಪ್ರೊ. ಎಂ.ಜಿ. ಗಚ್ಚಣ್ಣವರನ್ನು ಸನ್ಮಾನಿಸಲಾಯಿತು. ಡಾ. ರಶ್ಮಿ ಅಂಗಡಿ, ಮಾಜಿ ಸಚಿವ ಎಸ್.ಎಸ್. ಪಾಟೀಲ ವೇದಿಕೆ ಮೇಲೆ ಉಪಸ್ಥಿತರಿದ್ದರು.



ಪರಿಷತ್ತಿನ 110ನೇ ಸಂಸ್ಥಾಪನಾ ದಿನದ ಅಂಗವಾಗಿ 110 ಸಸಿಗಳನ್ನು ತೋಟಗಾರಿಕೆ ಇಲಾಖೆಯ ನಿರ್ದೇಶಕ ಸುರೇಶ ಕುಂಬಾರ ವಿತರಿಸಿದರು. ಗವಿಸಿದ್ಧಯ್ಯ ಹಳ್ಳಿಕೇರಿಮಠ ಹಾಗೂ ಆರ್.ವಿ. ಮ್ಯಾಗೇರಿ ಅವರಿಂದ ಕನ್ನಡ ಗೀತಗಾಯನ ಜರುಗಿದವು. ಡಾ. ಅಕ್ಕಮಹಾದೇವಿ ರೊಟ್ಟಿಮಠ ನಿರೂಪಿಸಿದರು. ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ಶ್ರೀಕಾಂತ ಬಡ್ಡೂರ ವಂದಿಸಿದರು.

ಕಾರ್ಯಕ್ರಮದಲ್ಲಿ ಪ್ರೊ. ಕೆ.ಎಚ್. ಬೇಲೂರ, ಡಾ. ರಾಜಶೇಖರ ದಾನರಡ್ಡಿ, ಶಕುಂತಲಾ ಸಿಂಧೂರ, ವಿ. ಹರಿನಾಥಬಾಬು, ಸಿ.ಕೆ.ಎಚ್. ಶಾಸ್ತ್ರಿ, ಡಿ.ಎಸ್. ಬಾಪುರಿ, ಅಮರೇಶ ರಾಂಪೂರ, ಸಿ.ಎಂ. ಮಾರನಬಸರಿ, ಪ್ರ.ತೋ. ನಾರಾಯಣಪೂರ, ಬಸವರಾಜ ವಾರಿ, ಸತೀಶ ಚನ್ನಪ್ಪಗೌಡ್ರ, ಕೃಷ್ಣಾ ಸಾವುಕಾರ, ಶಿವಾನಂದ ಭಜಂತ್ರಿ, ಬಿ.ಎಸ್. ಹಿಂಡಿ, ಆಯ್.ಎಸ್. ಹಿರೇಮಠ, ಮಹೇಶ ಶಟವಾಜಿ, ಷಡಕ್ಷರಿ ಮೆಣಸಿನಕಾಯಿ, ಎಸ್.ಸಿ. ಹಾಳಕೇರಿ, ಅ.ದ. ಕಟ್ಟಿಮನಿ, ಕೆ.ಜಿ. ವ್ಯಾಪಾರಿ, ಶಿ.ಶಿ. ನರೇಗಲ್, ಮಂಜುನಾಥ ಹಿಂಡಿ, ಉಮಾ ಪಾರ್ವತಿಮಠ, ಡಾ. ರಾಜೇಂದ್ರ ಗಡಾದ ಮೊದಲಾದವರು ಉಪಸ್ಥಿತರಿದ್ದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಕರ್ನಾಟಕ ಏಕೀಕರಣದ ಸಂದರ್ಭದಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಸಮ್ಮೇಳನ, ಪುಸ್ತಕ ಪ್ರಕಟನೆ, ಕಾರ್ಯಾಗಾರಗಳ ಮೂಲಕ ಕನ್ನಡಿಗರಲ್ಲಿ ಜಾಗೃತಿ ಮೂಡಿಸುವ ಕಾರ್ಯವನ್ನು ಮಾಡಿದೆ. ಕನ್ನಡ ನಾಡು-ನುಡಿ, ನೆಲ ಜಲದ ಪ್ರಶ್ನೆ ಬಂದಾಗ ಪರಿಷತ್ತು ಮುಂಚೂಣಿಯಲ್ಲಿ ನಿಂತು ಕನ್ನಡಿಗರಿಗೆ ನ್ಯಾಯ ಒದಗಿಸುವ ಕಾರ್ಯ ಮಾಡುತ್ತಿದೆ ಎಂದು ತಿಳಿಸಿದರು.

### ಕಸಾಪ 110ನೇ ಸಂಸ್ಥಾಪನಾ ದಿನಾಚರಣೆ, ವಿದ್ಯಾರ್ಥಿ ವಿಚಾರ ಸಂಕಿರಣ ಕಾರ್ಯಕ್ರಮ

# ನಾವೆಲ್ಲರೂ ಕಡ್ಡಾಯವಾಗಿ ಕನ್ನಡ ಬಳಸಬೇಕು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕನ್ನಡ ಭಾಷೆ ತನ್ನದೇ ಆದ ಶ್ರೇಷ್ಠ, ಶ್ರೀಮಂತ ಇತಿಹಾಸ ಹೊಂದಿ ಶಾಸ್ತ್ರೀಯ ಭಾಷೆಯ ಮನ್ನಣೆ ಪಡೆದಿದೆ. ಇಂತಹ ಭಾಷೆಯ ಬೆಳವಣಿಗೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಪಾತ್ರ ಹಿರಿದಾಗಿದೆ. ಇದಕ್ಕೆ ಅನೇಕ ಮಹನೀಯರು ಕಾರಣರಾಗಿದ್ದಾರೆ. ಕನ್ನಡ ಭಾಷೆಯ ಉಳಿಸಿ-ಬೆಳೆಸಲು ನಾವೆಲ್ಲರೂ ಕಡ್ಡಾಯವಾಗಿ ಕನ್ನಡ ಬಳಸಲೇಬೇಕು ಎಂದು ಹಿರಿಯ ಸಾಂಸ್ಕೃತಿಕ ಚಿಂತಕ ಡಿ.ಬಿ. ಬಳಿಗಾರ ಅಭಿಪ್ರಾಯಪಟ್ಟರು.

ಅವರು ಲಕ್ಷ್ಮೇಶ್ವರ ತಾಲೂಕಾ ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ಅಕ್ಕಮಹಾದೇವಿ ದೇವಸ್ಥಾನದಲ್ಲಿ ಹಮ್ಮಿಕೊಂಡ ಕಸಾಪ 110ನೇ ಸಂಸ್ಥಾಪನಾ ದಿನಾಚರಣೆ ಹಾಗೂ ವಿದ್ಯಾರ್ಥಿ ವಿಚಾರ ಸಂಕಿರಣ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಲಕ್ಷ್ಮೇಶ್ವರ ತಾಲೂಕು ಕಸಾಪ ಘಟಕದ ವತಿಯಿಂದ ಅತ್ಯುತ್ತಮ ಕಾರ್ಯಚಟುವಟಿಕೆಗಳು ನಡೆಯುತ್ತಿವೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಕ.ರಾ.ವಿ.ಪ. ಜಿಲ್ಲಾಧ್ಯಕ್ಷ ರಮೇಶ ರಿತ್ತಿ, ಕಾರ್ಯಕಾರಿ ಸಮಿತಿ ಸದಸ್ಯರಾದ ಬಾಪುಗೌಡ್ರ ಭರಮಗೌಡ್ರ, ಗಂಗಾಧರ ಅರಳಿ ಮಾತನಾಡಿದರು. ದಿನಾಚರಣೆಯ ಅಂಗವಾಗಿ ನಡೆದ ವಿದ್ಯಾರ್ಥಿ ವಿಚಾರ ಸಂಕಿರಣದಲ್ಲಿ ಶ್ರೀನಿಧಿ ಶಿಳ್ಳಿನ, ಪೂಜಾ ಆರಾಧ್ಯಮಠ, ರಕ್ಷಿತಾ ಸಂಗನಪೇಟ ಮತ್ತು ಸಹನಾ ಮೇಟಿ ಇವರು 'ಜನಸಾಮಾನ್ಯರತ್ತ ಕನ್ನಡ ಸಾಹಿತ್ಯ ಪರಿಷತ್ತು' ವಿಷಯದ ಕುರಿತು ಉತ್ತಮವಾಗಿ ವಿಷಯ ಮಂಡಿಸಿ ಎಲ್ಲರ ಮೆಚ್ಚುಗೆಗೆ ಪಾತ್ರರಾದರು. ವಿಶ್ರಾಂತ ಮುಖ್ಯ ಶಿಕ್ಷಕಿ ಎ.ಎಸ್. ಸವದತ್ತಿ ಹಾಗೂ ವಿಶ್ರಾಂತ ಶಿಕ್ಷಕ ವ್ಹಿ.ಎಂ. ಹೂಗಾರ ಹಾಡುಗಳನ್ನು ಪ್ರಸ್ತುತ ಪಡಿಸಿದರು.




ಕಾರ್ಯಕ್ರಮದ ಸಂಚಾಲಕರಾದ ಎಸ್.ಬಿ.ಅಣ್ಣಿಗೇರಿ, ಪಿ.ಎಚ್. ಕೊಂಡಾಬಿಂಗಿ, ಶಂಕ್ರಪ್ಪ ಶಿಳ್ಳಿನ, ಶ್ರೀಮತಿ ಶಿಳ್ಳಿನ್, ಈರಣ್ಣ ಗಾಣಿಗೇರ ಉಪಸ್ಥಿತರಿದ್ದರು. ಶ್ರೀನಿಧಿ ಶಿಳ್ಳಿನ ಪ್ರಾರ್ಥಿಸಿದಳು, ಕಾರ್ಯಕಾರಿ ಮಹಿಳಾ ಸದಸ್ಯ ನಿರ್ಮಲಾ ಅರಳಿ ಸ್ವಾಗತಿಸಿದರು. ಸಂಘಟನಾ ಕಾರ್ಯದರ್ಶಿ ನಾಗರಾಜ ಮಜ್ಜಿಗುಡ್ಡ ನಿರೂಪಿಸಿದರು. ಕನ್ನಡ ಉಪನ್ಯಾಸಕ ತಮ್ಮನಗೌಡ ಪಾಟೀಲ ವಂದಿಸಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ವಿಶ್ರಾಂತ ಉಪನ್ಯಾಸಕ ಎಸ್.ಎನ್. ಮಳಲಿ, ಕಸಾಪ ಲಕ್ಷ್ಮೇಶ್ವರ ತಾಲೂಕು ಘಟಕ ವಿಶಿಷ್ಟ ಹಾಗೂ ವಿಭಿನ್ನ ಕಾರ್ಯಕ್ರಮ ಸಂಘಟಿಸುವುದರ ಮೂಲಕ ಜಿಲ್ಲೆಯಲ್ಲಿಯೇ ಮಾದರಿ ಘಟಕವಾಗಿದೆ ಎಂದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka